# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ – 142 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 23–12–2024 ಸೋಮವಾರ | ಪುಟ: 4 | ಬೆಲೆ : ರೂ.2–00

Volume - 02 Issue - 142 | RNI No: KARKAN/2023/88462 | KA/SK/CTA-874/2024-2026 | Chitradurga | Date: 23-12-2024 Monday | Page: 4 | Price: Rs. 2-00



ಒಳಪುಟದ ಸುದ್ದಿಗಳು

ದಾವಣಗೆರೆಯಲ್ಲಿ ಜನವರಿ 4, 5 ರಂದು ರಾಜ್ಯ ಮಟ್ಟದ ಯುವಜನೋತ್ಸವ 2

ಚಳ್ಳಕೆರೆ ನಗರದಲ್ಲಿ ನಾಯಿಗಳ ಹೆಚ್ಚಳ: ನಿಯಂತ್ರಣಕ್ಕೆ ಜನರ ಮನವಿ 3

ಹೆಣ್ಣಿನ ಮೇಲಿನ ಲೈಂಗಿಕ ದೌರ್ಜನ್ಯ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### 23, 24ಕ್ಕೆ ಸೋದೆ ಶ್ರೀಮಠದ ವಿಶ್ವವಲ್ಲಭ ತೀರ್ಥ ಶ್ರೀಗಳ ಭೇಟಿ

» ದಾವಣಗೆರೆ

ನಗರದ ಸೋದೆ ಶ್ರೀಗುರು ವಾದಿದಾರ ಮಠ ದೈವಜ್ಞ ಬ್ರಾಹ್ಮಣರ ಶಿಷ್ಯವೃಂದದಿಂದ ಸೋದೇ ಶ್ರೀಮಠದ ಉತ್ತರಾಧಿಕಾರಿ ಗುರುಗಳಾದ ಶ್ರೀ ವಿಶ್ವವಲ್ಲಭತೀರ್ಥ ಶ್ರೀಪಾದಂಗಳರಿಂದ ಡಿಸೆಂಬರ್ 23ರ ಸೋಮವಾರ ದಾವಣಗೆರೆ ನಗರದಲ್ಲಿ ಆಶೀರ್ವಚನ ಕಾರ್ಯಕ್ರಮ ಆಯೋಜಿಸಲಾಗಿದೆ. 23ರಂದು ಬೆಳಿಗ್ಗೆ ಶ್ರೀಗಳು ದಾವಣಗೆರೆಗೆ ಆಗಮಿಸಲಿದ್ದಾರೆ. ಅಂದು ಬೆಳಿಗ್ಗೆ 7ಕ್ಕೆ ಶ್ರೀಪಾದಂಗಳವರನ್ನು ಮೆರವಣಿಗೆ ಮೂಲಕ ವಿನೋಬಾ ನಗರದ 1ನೇ ಮುಖ್ಯರಸ್ತೆಯಲ್ಲಿನ ಶ್ರೀಮತಿ ಗೌರಮ್ಮ ನರಹರಿಶೇಟ್ ಸಭಾಭವನಕ್ಕೆ ಕರೆ ತರಲಾಗುವುದು. ನಂತರ ಸಂಜೆ ಶ್ರೀಗಳಿಮದ ಆಶೀರ್ವಚನ, ಪೂಜೆ ಕಾರ್ಯಕ್ರಮ ಏರ್ಪಡಿಸಲಾಗಿದ್ದು, ನಂತರ ಪ್ರಸಾದದ ವ್ಯವಸ್ಥೆ ಮಾಡಲಾಗಿದೆ. 24ರ ಮಂಗಳವಾರ ಬೆಳಿಗ್ಗೆ 10ಕ್ಕೆ ಶ್ರೀಗಳಿಂದ ಆಶೀರ್ವಚನ, ಶ್ರೀಗಳಿಗೆ ಪಾದಪೂಜೆ ನಡೆಯಲಿದ್ದು, ನಂತರ ಪ್ರಸಾದದ ವ್ಯವಸ್ಥೆ ಕಲ್ಪಿಸಲಾಗಿದೆ. ಕಾರ್ಯಕ್ರಮಕ್ಕೆ ದೈವಜ್ಞ ಬ್ರಾಹ್ಮಣರ ಸಮುದಾಯವು ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ನಲ್ಲೂರು ಎಸ್.ರಾಜಕುಮಾರ್, ಅಣ್ಣಪ್ಪ, ಸುರೇಂದ್ರ ಕೋರಿದ್ದಾರೆ.

### ನಾಳೆ ಮಿಶ್ರತಳಿ ಹಸು-ಕರು ಪ್ರದರ್ಶನ ಮತ್ತು ಬರಡು ರಾಸುಗಳ ಚಿಕಿತ್ಸಾ ಶಿಬಿರ.

» ಚಳ್ಳಕೆರೆ

ನರಹರಿ ಸೇವಾಪ್ರತಿಷ್ಠಾನ, ಪಶುಪಾಲನ ಮತ್ತು ಪಶುವೈದ್ಯ ಇಲಾಖೆ, ಶಿವಮೊಗ್ಗ, ದಾವಣಗೆರೆ, ಚಿತ್ರದುರ್ಗ ಜಿಲ್ಲಾ ಸಹಕಾರ ಹಾಲು ಉತ್ಪಾದಕ ಸಂಘಗಳ ಒಕ್ಕೂಟ, ನರಹರಿನಗರ ಹಾಲುಉತ್ಪಾದಕರ ಸಹಕಾರ ಸಂಘದ ವತಿಯಿಂದ ಡಿ.24ರ ಮಂಗಳವಾರ ಮಿಶ್ರತಳಿ ಹಸು–ಕರು ಪ್ರದರ್ಶನ ಮತ್ತು ಬರಡು ರಾಸುಗಳ ಚಿಕಿತ್ಸಾ ಶಿಬಿರವನ್ನು ಏರ್ಪಡಿಸಲಾಗಿದೆ ಎಂದು ಪಶು ಇಲಾಖೆ ಸಹಾಯಕ ನಿರ್ದೇಶಕ ಡಾ.ಎಸ್.ರೇವಣ್ಣ ತಿಳಿಸಿದ್ದಾರೆ. ಕಾರ್ಯಕ್ರಮದಿವ್ಯಸಾನಿಧ್ಯವನ್ನು ನರಹರಿ ಸದ್ಗುರು ಪೀಠಾಧ್ಯಕ್ಷ ವೈ.ರಾಜಾರಾಂಸ್ವಾಮೀಜಿ ವಹಿಸಲಿದ್ದು, ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ಕಾರ್ಯಕ್ರಮವನ್ನು ಉದ್ಘಾಟಿಸುವರು. ಅಧ್ಯಕ್ಷತೆಯನ್ನು ಕೆಎಂಎಫ್ ಜಿಲ್ಲಾ ನಿರ್ದೇಶಕ ಬಿ.ಸಿ.ಸಂಜೀವಮೂರ್ತಿ ವಹಿಸಲಿದ್ದು, ಹಾಲುಒಕ್ಕೂಟದ ಅಧ್ಯಕ್ಷ ವಿದ್ಯಾಧರ, ಜಿ.ಪಿ.ರೇವಣಸಿದ್ದಪ್ಪ, ಬಿ.ಆರ್. ರವಿಕುಮಾರ್, ಜಿ.ಪಿ.ಶೇಖರಪ್ಪ, ಮಂಗಳಮ್ಮ, ಓಬಯ್ಯ, ಬಿ.ಸಿ.ಸತೀಶ್‌ಕುಮಾರ್, ಮಂಜುನಾಥ, ಪಿಡಿಒ ಎಂ.ರಾಮಚಂದ್ರಪ್ಪ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ವಿಶೇಷ ಆಹ್ವಾನಿತರಾಗಿ ಶಿವಮೊಗ್ಗ ಹಾಲು ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕ ಎಸ್.ಜಿ.ಶೇಖರ್, ಕೆ.ಆರ್. ಮುರುಳೀಧರ, ಎಸ್.ಎಂ.ಮೂರ್ತಿ, ಎನ್. ಕುಮಾರ್ ಮುಂತಾದವರು ಪಾಲ್ಗೊಳ್ಳುವರು.

### ಬಂಗಾರಕ್ಕನಹಳ್ಳಿ: ಡಿ.26 ರಿಂದ 29 ರವರೆಗೆ ಶೃಂಗೇಶ್ವರ ಸ್ವಾಮಿಯ ಕಾರ್ತಿಕ ಮಹೋತ್ಸವ

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕಿನ ತುರುವನೂರು ಹೋಬಳಿ ಬಂಗಾರಕ್ಕನಹಳ್ಳಿ ಗ್ರಾಮದಲ್ಲಿ ಇದೇ ಡಿ.26 ರಿಂದ 29 ರವರೆಗೆ ಶೃಂಗೇಶ್ವರ ಸ್ವಾಮಿ (ನಂದೀಶ್ವರ ಸ್ವಾಮಿ) ಯ ಕಾರ್ತಿಕ ಮಹೋತ್ಸವ ಮತ್ತು ಗ್ರಾಮದ ಎಲ್ಲಾ ದೇವರುಗಳ ಪೂಜಾ ಕಾರ್ಯಕ್ರಮ ನಡೆಯಲಿದೆ. ಡಿ.26ರಂದು ಸಂಜೆ 7ಕ್ಕೆ ಸ್ವಾಮೀಜಿಯವರ ಗದ್ದಿಗೆ ದೀಪೋತ್ಸವ, ಡಿ.27ರಂದು ಬೆಳಿಗ್ಗೆ ಗಂಗೆ ಪೂಜೆ, ಸಂಜೆ ಅಭಿಷೇಕ, ಡಿ.28ರಂದು ಗುಡ್ಡದ ಶೃಂಗೇಶ್ವರ ಸ್ವಾಮಿಯ ವಿವಿಧ ಜಾನಪದ ಕಲಾ ಪ್ರಕಾರಗಳೊಂದಿಗೆ ಮೆರವಣಿಗೆ ಮತ್ತು ಸಂಜೆ ಕಾರ್ತಿಕ ಮಹೋತ್ಸವ ಹಾಗೂ ಗ್ರಾಮದ ಎಲ್ಲಾ ದೇವರುಗಳ ಪೂಜಾ ಕಾರ್ಯಕ್ರಮಗಳು ನಡೆಯಲಿದ್ದು, ರಾತ್ರಿ ಭಜನೆ ಕಾರ್ಯಕ್ರಮ ನಡೆಯಲಿದೆ. ಡಿ.29ರಂದು ಗುಡ್ಡದ ಶೃಂಗೇಶ್ವರ ಸ್ವಾಮಿಯ ಮಹಾ ಮಂಗಳಾರತಿ ಮತ್ತು ಅನ್ನಸಂತರ್ಪಣೆ (ದಾಸೋಹ) ನಡೆಯಲಿದೆ.

# ಡಾ.ಬಿ.ಆರ್.ಅಂಬೇಡ್ಕರ್ ಮಾರ್ಗದಲ್ಲಿ ಎಲ್ಲಾರೂ ಸಾಗೋಣ: ಟಿ.ರಘುಮೂರ್ತಿ





» ನಮ್ಮಜನ

ಚಿತದುರ್ಗ: ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಮಾರ್ಗದಲ್ಲಿ ಎಲ್ಲರೂ ಸಾಗೋಣ, ಸದಾ ಜನಾಂಗದ ಜೊತೆಯಲ್ಲಿ ನಾನಿರುತ್ತೇನೆ ಎಂದು ಚಳ್ಳಕೆರೆ ಶಾಸಕ ಮತ್ತು ಸಣ್ಣ ಕೈಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷ ಟಿ.ರಘುಮೂರ್ತಿ ಭರವಸೆ ಹೇಳಿದರು.

ನಗರದ ತರಾಸು ರಂಗಮಂದಿರದಲ್ಲಿ ಭಾನುವಾರ ಚಿತ್ರದುರ್ಗ ವಾಲ್ಮೀಕಿ ನಾಯಕ ನೌಕರರ ಕ್ಷೇಮಾಭಿವೃದ್ಧಿ ಮತ್ತು ಸಾಂಸ್ಕೃತಿಕ ಸಂಘದ ವತಿಯಿಂದ ಆಯೋಜಿಸಲಾಗಿದ್ದ ವಾಲ್ಮೀಕಿ ನಾಯಕ ನೌಕರರ ಸಮಾವೇಶ ಹಾಗೂ ಪ್ರತಿಭಾ ಪುರಸ್ಕಾರ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಕಳೆದ 15 ವರ್ಷಗಳಿಂದಲೂ ವಾಲ್ಮೀಕಿ ನಾಯಕ ನೌಕರರ ಸಮಾವೇಶ ಹಾಗೂ ಪ್ರತಿಭಾ ಪುರಸ್ಕಾರ ಹಮ್ಮಿಕೊಂಡು ಬರುತ್ತಿರುವುದರಿಂದ ಈ ಜನಾಂಗದ ಸಾಧಕರು, ಪ್ರತಿಭಾವಂತರನ್ನು ಗುರುತಿಸಲು ನೆರವಾಗಿದೆ. ಎಲ್ಲಾ ಜಾತಿ, ಸಮಾಜಗಳಲ್ಲಿ ರಾಜಕೀಯ ವ್ಯವಸ್ಥೆ ಇದೆ. ಅದಕ್ಕಾಗಿ ಜನಪ್ರತಿನಿಧಿಗಳು ಕೇವಲ ಒಂದು ಜನಾಂಗಕ್ಕೆ ಸೀಮಿತವಾಗಿರುವುದು ಕಷ್ಟ. ಎಲ್ಲರ ಕಷ್ಟ–ಸುಖಗಳನ್ನು ಕೇಳಿ ಸಮಸ್ಯೆಗಳಿಗೆ ಪರಿಹಾರ ನೀಡಬೇಕಿದೆ ಎಂದು ಹೇಳಿದರು.

ಸರ್ಕಾರಿ ನೌಕರಿ ಸಿಕ್ಕಿತೆಂದು ನಿಮ್ಮ ಪಾಡಿಗೆ ನೀವು ಇರುವುದು ಸರಿಯಲ್ಲ. ಶೋಷಿತರು, ತುಳಿತಕ್ಕೊಳಗಾದವರು, ಕುಟುಂಬದವರಿಗೆ ನೆರವಿನ ಹಸ್ತ ಚಾಚಬೇಕು. ಪರಿಶ್ರಮ ಇಚ್ಛಾಶಕ್ತಿಯಿದ್ದರೆ ಮಾತ್ರ ಜೀವನದಲ್ಲಿ ಏನನ್ನಾದರೂ ಸಾಧನೆ ಮಾಡಬಹುದು. ಯಾವ ಹುದ್ದೆ, ಅಧಿಕಾರದಲ್ಲಿದ್ದೇವೆನ್ನುವುದು ಮುಖ್ಯವಲ್ಲ ಸಾಧನೆ ಮಾಡುವ ಛಲವಿರಬೇಕು. ವಿದ್ಯಾರ್ಥಿಗಳು ಕೇವಲ ಅಂಕಗಳನ್ನು ಗಳಿಸುವುದಷ್ಟೆ ಸಾಧನೆ ಅಂದುಕೊಳ್ಳಬಾರದು. ಶಿಕ್ಷಣದ ಜೊತೆ ಗುರು–ಹಿರಿಯರು ತಂದೆ–ತಾಯಿಗಳನ್ನು ಗೌರವಿಸುವ ಸಂಸ್ಕೃತಿ ಸಂಸ್ಕಾರ ಕಲಿಯಬೇಕು ತಿಳಿಸಿದರು.

ಪರಿಶಿಷ್ಟ ಜಾತಿ, ಪರಿಶಿಷ್ಟ ಜನಾಂಗದವರು ಕಷ್ಟದಲ್ಲಿರುವ ಬೇರೆ ಜಾತಿಯವರಿಗೆ ಸಹಾಯ ಮಾಡುವ ಗುಣ ಬೆಳೆಸಿಕೊಳ್ಳಿ. ರಾಜನಹಳ್ಳಿ ವಾಲ್ಮೀಕಿ ಗುರುಪೀಠದ ಪ್ರಸನ್ನಾನಂದ ಸ್ವಾಮೀಜಿ ಬೆಂಗಳೂರಿನ ಉದ್ಯಾನವನದಲ್ಲಿ 258 ದಿನಗಳ ಕಾಲ ಧರಣಿ ಸತ್ಯಾಗ್ರಹ ನಡೆಸಿದ ಫಲವಾಗಿ ಪರಿಶಿಷ್ಟ ವರ್ಗದವರಿಗೆ ಶೇ.3 ರಿಂದ 7 ಹಾಗೂ ಪರಿಶಿಷ್ಟ ಜಾತಿಯವರಿಗೆ ಶೇ.15 ರಿಂದ 17 ರಷ್ಟು ಮೀಸಲಾತಿ ಹೆಚ್ಚಿಸಿರುವುದನ್ನು ಸದುಪಯೋಗಪಡಿಸಿಕೊಂಡು ಜನಾಂಗದ ಮಕ್ಕಳು ಶಿಕ್ಷಣವಂತರಾಗಿ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ, ರಾಜಕೀಯವಾಗಿ ಬಲಾಢ್ಯರಾಗಬಹುದು ಎಂದು ತಿಳಿಸಿದರು.

ಸಂಸದ ಗೋವಿಂದ ಕಾರಜೋಳ ಮಾತನಾಡಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಶಿಕ್ಷಣ, ಸಂಘಟನೆ, ಹೋರಾಟಕ್ಕೆ ಮಹತ್ವ ನೀಡಿದ್ದಾರೆ. ಅವರ ದಾರಿಯಲ್ಲಿ ಪ್ರತಿಯೊಬ್ಬರು ಸಾಗಬೇಕಿದೆ. ಸರ್ಕಾರಿ ಕೆಲಸ ಸಿಕ್ಕವರು ಹುಟ್ಟಿದ ಊರು, ಒಡಹುಟ್ಟಿದವರನ್ನು ಎಂದಿಗೂ ಮರೆಯಬಾರದು. ಎಲ್ಲರಿಗೂ ಸರ್ಕಾರಿ ಕೆಸಲ ಸಿಗುವುದಿಲ್ಲ. ನೌಕರಿ ಸಿಕ್ಕವರು ತಾವಾಯಿತುತಮ್ಮಕುಟುಂಬವಾಯಿತೆಂದು ಸುಮ್ಮನಿರುವ ಬದಲು ಬಂಧು, ಬಳಗ, ಅಸಹಾಯಕರನ್ನು ಜೊತೆಯಲ್ಲಿ ತೆಗೆದುಕೊಂಡು ಹೋಗುವ ಪ್ರಯತ್ನ ಮಾಡಬೇಕು ಎಂದು ಸಲಹೆ ನೀಡಿದರು.

ಬಸವರಾಜ ಬೊಮ್ಮಾಯಿ ರಾಜ್ಯದ ಮುಖ್ಯಮಂತ್ರಿಯಾಗಿದ್ದಾಗ ಪರಿಶಿಷ್ಟ ವರ್ಗಕ್ಕೆ ಶೇ. 3 ರಿಂದ 7 ಹಾಗೂ ಪರಿಶಿಷ್ಟ ಜಾತಿಗೆ ಶೇ.15 ರಿಂದ 17 ಕ್ಕೆ ಮೀಸಲಾತಿ ಪ್ರಮಾಣ ಹೆಚ್ಚಿಸಿದ್ದರಿಂದ ಶಿಕ್ಷಣ, ಉದ್ಯೋಗದಲ್ಲಿ ಅನುಕೂಲವಾಗಿದೆ. ಹಾಗಾಗಿ ಅವರನ್ನು ಈ ಸಂದರ್ಭದಲ್ಲಿ ಸ್ಮರಿಸಬೇಕಿದೆ ಎಂದರು.

ಕಾರ್ಯಕ್ರಮದಲ್ಲಿ ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ,ವಿಜಯ ನಗರ ಜಿಲ್ಲಾ ಪಂಚಾಯಿತಿ ಮುಖ್ಯ ಲೆಕ್ಕಾಧಿಕಾರಿ ಸಿ.ಜಿ.ಶ್ರೀನಿವಾಸ್, ಜಿಲ್ಲಾ ಮದಕರಿ ನಾಯಕ ವಿದ್ಯಾಸಂಸ್ಥೆಯ ಅಧ್ಯಕ್ಷ ಎಸ್.ಸಂದೀಪ್, ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ ಜಂಟಿ ನಿರ್ದೇಶಕ ಕೆ.ಪಿ.ಮಧುಸೂದನ್,ಡಾ.ಸಿ.ಎಲ್.ಪಾಲಾಕ್ಷ ಸೇರಿದಂತೆ ನಾಯಕ ಸಮಾಜದ ಗಣ್ಯರು ಇದ್ದರು.

ಚಿತ್ರದುರ್ಗ ವಾಲ್ಮೀಕಿ ನಾಯಕ ನೌಕರರ ಕ್ಷೇಮಾಭಿವೃದ್ಧಿ ಮತ್ತು ಸಾಂಸ್ಕೃತಿಕ ಸಂಘದ ಅಧ್ಯಕ್ಷ ಡಾ.ಹೆಚ್.ಗುಡ್ಡದೇಶ್ವರಪ್ಪ ಸಮಾವೇಶದ ಅಧ್ಯಕ್ಷತೆ ವಹಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಇದೇ ಸಂದರ್ಭದಲ್ಲಿ ಹಿರಿಯ ನ್ಯಾಯವಾದಿ ಎಚ್.ಎಂ.ಎಸ್.ನಾಯಕ ಅವರಿಗೆ ಜೀವಮಾನ ಸಾಧನ ಪ್ರಶಸ್ತಿ ಪ್ರಧಾನ ಮಾಡಲಾಯಿತು.





### ಸಮಾಜ ಸಾಧಕರಿಗೆ ಸನ್ಮಾನ

ನಾಯಕ ಸಮಾಜದ ಸಾಧಕರಾದ ಮಹರ್ಷಿ ವಾಲ್ಮೀಕಿ ರಾಜ್ಯ ಪ್ರಶಸ್ತಿ ಪುರಸ್ಕೃತ ಕಿಲಾರಿ ಜೋಗಯ್ಯ, ಪತ್ರಕರ್ತ ಹಾಗೂ ಜಿಲಾ □□ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಸಿ. ರಾಜಶೇಖರ, ಉದ್ಯಮಿ ಮಂಜುಳ, ಮುಖ್ಯಮಂತ್ರಿ ಪದಕ ಪುರಸ್ಕೃತರು ಹಾಗೂ ಜಿಲ್ಲಾ ಸಶಸ್ತ್ರ ಮೀಸಲು ಪಡೆಯ ಡಿವೈಎ□□ಪಿ ಗಣೇಶ್ ಹಾಗೂ ಸಮಾಜ ಓ.ಬಿ.ಬಸವರಾಜಪ್ಪ, ಹೆಚ್.ತಿಪ್ಪಯ್ಯ, ಪಿ.ವಿ.ಸವಿತಾ, ಎ.ನಾಗರಾಜ, ಎಸ್.ರಾಜಪ್ಪ, ಬಿ.ವಿಮಾಲಾಕ್ಷಿ, ಎಂ.ಎಂ.ತಿಪ್ಪೇಸ್ವಾಮಿ, ಜೆ.ಎಸ್.ರವಿಕುಮಾರ್, ಎಂ.ಜೆ.ಬೋರೇಶ ಅವರನ್ನು ಸನ್ಮಾನಿಸಲಾಯಿತು ಹಾಗೂ 135 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

## ಪ್ರಮುಖ ಸುದ್ದಿ

# ಡಿ.25ಕ್ಕೆ ಸ್ವಸಹಾಯ ಸಂಘಗಳಿಗೆ ಲಾಭಾಂಶ ವಿತರಣೆ

» ಚಿತ್ರದುರ್ಗ

ಜಿಲ್ಲೆಯ ಹೊಳಲ್ಕೆರೆ ನಗರದಲ್ಲಿ ನೂತನವಾಗಿ ನಿರ್ಮಾಣ ಮಾಡಲಾದ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭೀವೃದ್ಧಿ ಯೋಜನೆ ಬಿ.ಸಿ.ಟ್ರಸ್ಟ್‌ನ ವಿಕಾಸ ಸೌಧದ ಉದ್ಘಾಟನೆಹಾಗೂಸ್ವಸಹಾಯಸಂಘಗಳಿಗೆ ಲಾಭಾಂಶ ವಿತರಣಾ ಸಮಾರಂಭವೂ ಡಿ. 25 ರ ಬುಧವಾರ ನಡೆಯಲಿದೆ ಎಂದು ಶಾಸಕರಾದ ಎಂ.ಚಂದ್ರಪ್ಪ ತಿಳಿಸಿದರು.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಅವರು, ಪುರಸಭೆಯವತಿಯಿಂದ ಈ ಸಂಘಕ್ಕೆ ಜಾಗವನ್ನು ನೀಡಲಾಗಿತ್ತು ಇದರಲ್ಲಿ ಇವರು ನೂತನವಾದ ಕಟ್ಟಡವನ್ನು ಅವರ ಸ್ವಂತ ಹಣದಲ್ಲಿ ಸರ್ಕಾರದ ಸಹಾಯವಿಲ್ಲದೆ ನಿರ್ಮಾಣ ಮಾಡಿಕೊಂಡಿದ್ದಾರೆ. ಹೊಳಲ್ಕೆರೆಯಲ್ಲಿ ಸಂಘದವರು ತಾಲ್ಲೂಕಿನಲ್ಲಿ 4518 ಸ್ವಸಹಯ ಸಂಘಗಳನ್ನು ರಚನೆ ಮಾಡಿ ಇದರಲ್ಲಿ 40265 ಜನರನ್ನು ಸದಸ್ಯರನ್ನಾಗಿ ಮಾಡಿಕೊಂಡಿದ್ದಾರೆ. ಇವರ ಉಳಿತಾಯದ ಇದುವರೆವಿಗೆ 24.46 ಕೋಟಿ ಆಗಿದೆ, ಉತ್ತಮವಾದ ನಿರ್ವಹಣೆಯನ್ನು ಮಾಡಿದ ಸಂಘಗಳಿಗೆ ಬ್ಯಾಂಕ್‌ಗಳಿಂದ 204.16 ಕೋಟಿ ರೂ. ಸಾಲವನ್ನು ಕೊಡಿಸಲಾಗಿದೆ. ಉತ್ತಮವಾದ ಆರ್ಥಿಕ ವ್ಯವಹಾರವನ್ನು ನಡೆಸಿದ ಸಂಘಗಳಿಗೆ ಲಾಭಾಂಶವನ್ನು ವಿತರಣೆ ಮಾಡಲಗುತ್ತಿದ್ದು ಇದುವರೆವಿಗೂ ಎರಡು ಬಾರಿ ಲಾಭಾಂಶವನ್ನು ವಿತರಣೆ ಮಾಡಲಾಗಿದೆ ಈಗ ಮೂರನೇ ಭಾರಿ ಲಾಭಾಂಶವನ್ನು ವಿತರಣೆ ಮಾಡಲು ಸಂಘ ಮುಂದಾಗಿದ್ದು 2703 ಸಂಘಗಳಿಗೆ 11 ಕೋಟಿ ರೂ.ಗಳನ್ನು ವಿತರಣೆ ಮಾಡಲಾಗುತ್ತದೆ ಎಂದರು.

ಇದರೊಂದಿಗೆ ಸಂಘದ ಸದಸ್ಯ ಮಕ್ಕಳ ಶಿಕ್ಷಣಕ್ಕೆ ಒತ್ತು ನೀಡುವುದರ ಮೂಲಕ 1788 ವಿದ್ಯಾರ್ಥಿಗಳಿಗೆ 1.60 ಕೋಟಿ ಶಿಷ್ಯ ವೇತನವನ್ನು ನೀಡಲಾಗಿದೆ. 5 ಬಡ ಕುಟುಂಬಗಳಿಗೆ ವಾತ್ಸಾಲ್ಯ ಮನೆ ಯೋಜನೆಯಡಿ ಮನೆಗಳನ್ನು ನಿರ್ಮಾಣ ಮಾಡಿ ಕೊಡಲಾಗಿದೆ. 75 ಜನರಿಗೆ ತಲಾ ಮಾಸಿಕವಾಗಿ 1000 ರೂ.ಗಳನ್ನು ದುರ್ಬಲ ವರ್ಗದವರಿಗೆ ನೀಡಲಾಗುತ್ತಿದೆ. 239 ವಿಕಲ ಚೇತನರಿಗೆ ಅಗತ್ಯವಾದ ಉಪಕರಣಗಳನ್ನು ನೀಡಲಾಗಿದೆ. ತಾಲ್ಲೂಕಿನಲ್ಲಿ 8 ಕೆರೆಗಳ ಹೂಳನ್ನು 55.99 ಲಕ್ಷ ರೂ,ಮೊತ್ತದಲ್ಲಿ ತೆಗೆಸಲಾಗಿದೆ ಎಂದರು.

ದಿನಾಂಕ 25.12.2024 ರಂದು ಬುಧವಾರ ಬೆಳಗ್ಗೆ 10:00 ಗಂಟೆಗೆ ಡಾ ಡಿ. ವೀರೇಂದ್ರ ಹೆಗ್ಗಡೆಯವರು ಉದ್ಘಾಟನೆ ನೆರವೇರಿಸಲಿದ್ದಾರೆ. ಸ್ವ–ಸಹಾಯ ಸಂಘಗಳಿಗೆ ಲಾಭಾಂಶ ವಿತರಣೆಯನ್ನು ಯೋಜನಾ ಮತ್ತು ಸಾಂಖ್ಯಿಕ ಇಲಾಖೆ ಸಚಿವರಾದ ಡಿ. ಸುಧಾಕರ್ ಲಾಭಾಂಶ ಪಡೆದ ಸ್ವ–ಸಹಾಯ ಸಂಘಗಳಿಗೆ ವಿತರಣೆ ಮಾಡುವರುನಮ್ಮೂರು ನಮ್ಮ ಕೆರೆ ಕಾರ್ಯಕ್ರಮದ ಪುನಶ್ಚೇತನಗೊಂಡ ಕೆರೆಯ ಹಸ್ತಾಂತರ ಪ್ರಮಾಣ ಪತ್ರ ವಿತರಣೆಯನ್ನು ಸಂಸದರಾದ ಗೋವಿಂದ ಎಮ್ ಕಾರಜೋಳ, ಇವರು ಕೆರೆ ಸಮಿತಿಯವರಿಗೆ ಹಸ್ತಾಂತರಿಸಲಿರುವರು. ನಿರಾಶ್ರಿತ ಕುಟುಂಬಕ್ಕೆ ಸೂರು ಕಲ್ಪಿಸುವ ನಿಟ್ಟಿನಲ್ಲಿವಾತ್ಸಲ್ಯಮನೆನಿರ್ಮಾಣವಾಗಿದ್ದು, ಇದರ ಹಸ್ತಾಂತರವನ್ನು ಮಾಜಿ ಸಚಿವರಾದ ಹೆಚ್. ಆಂಜನೇಯ, ಫಲಾನುಭವಿಗಳಿಗೆ ಮಾಡುವರು. ವಿದ್ಯಾರ್ಥಿಗಳಿಗೆ ಕ್ಷೇತ್ರದ ಮೂಲಕ ಸುಜ್ಞಾನ ನಿಧಿ ಶಿಷ್ಯವೇತನ ಮಂಜೂರಾತಿ ಪತ್ರವಿತರಣೆಯನ್ನುವಿಧಾನ ಪರಿಷತ್ ಸದಸ್ಯರಾದ ಕೆ.ಎಸ್.ನವೀನ್. ಇವರು ನಡೆಸಲಿರುವರು. ಗ್ರಾಮಾಭಿವೃದ್ಧಿ ಯೋಜನೆಯ ಸಮಗ್ರ ಕಾರ್ಯಕ್ರಮಗಳ ಕುರಿತು ಆಶಯ ಭಾಷಣವನ್ನು ಗ್ರಾಮಾಭಿವೃದ್ಧಿ ಯೋಜನೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಅನಿಲ್ ಕುಮಾರ್ ಎಸ್.ಎಸ್ ಇವರು ಮಾಡಲಿರುವರು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿಗಳಾದ ವೆಂಕಟೇಶ್, ಪುರಸಭೆಯ ಅಧ್ಯಕ್ಷ ವಿಜಯಸಿಂಹ ಖಾಟ್ರೋತ್, ಉಪಾಧ್ಯಕ್ಷರಾದ ನಾಗರತ್ನ ಪ್ರಜಾಪಿತ ಬ್ರಹ್ಮಕುಮಾರಿ ವಿಶ್ವ ವಿದ್ಯಾಲಯದ ಸಂಚಾಲಕರಾದ ಸುಮಿತ್ರಕ್ಕ ಸೇರಿದಂತೆ ಪುರಸಭೆಯ ಸದಸ್ಯರು ಭಾಗವಹಿಸಲಿದ್ದಾರೆ.



ಫಾಸ್ಟ್ ನ್ಯೂಸ್

## ಕೊಲೆ ಆರೋಪಿಗಳ ಬಂಧಿಸಿದ ಪರಶುರಾಮಪುರ ಪೊಲೀಸರು



» ಚಳ್ಳಕೆರೆ

ತಾಲ್ಲೂಕಿನ ಪರಶುರಾಮಪುರ ಪೊಲೀಸ್ ಠಾಣಾ ವ್ಯಾಪ್ತಿಯ ನಾಗಪ್ಪನಹಳ್ಳಿ ಗೇಟ್‌ನ ಪಿ.ಮಹದೇವಪುರದ ಗೌರಮ್ಮ ಎಂಬುವವರ ಜಮೀನಿನಲ್ಲಿಕಳೆದಶುಕ್ರವಾರನಡೆದಕೊಲೆಪ್ರಕರಣಕ್ಕೆ ಸಂಬಂಧಿಸಿದಂತೆ ನಾಲ್ವರು ಆರೋಪಿಗಳನ್ನು ಬಂಧಿಸುವಲ್ಲಿ ಪರಶುರಾಮಪುರ ಪೊಲೀಸ್ ಯಶಸ್ವಿಯಾಗಿದ್ದಾರೆ. ಆಂಧ್ರ ಮೂಲಕ ವಡ್ಡೆಪಾಳ್ಯಂ ಗ್ರಾಮದ ಎನ್.ಗಿತ್ತರಾಜ(28) ಎಂಬ ವ್ಯಕ್ತಿಯನ್ನು ರಾಮಣ್ಣ(30), ಕೊಟ್ರೇಶ್(25), ಬಸವರಾಜ(24), ಸುಧಮ್ಮ(43) ಎಂಬುವವರು ಕೊಲೆ ಮಾಡಿದ್ದರು. ಪ್ರಕರಣವನ್ನು ಬೆನ್ನತ್ತಿದ ಪೊಲೀಸರು 48ಗಂಟೆಯಲ್ಲೇ ಕೊಲೆ ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ಆಂಧ್ರದ ಮಲ್ಲಯ್ಯನೂರು ಗ್ರಾಮದ ರಾಮಣ್ಣನ ಸಂಬಂಧಿ ಸುಶೀಲಮ್ಮಳ ಮತ್ತು ಎನ್.ಗಿತ್ತರಾಜನ ನಡುವೆ ಸಲುಗೆ ಇದ್ದನ್ನು ಕಂಡ ರಾಮಣ್ಣ ಗಿತ್ತರಾಜನ ಮೇಲೆ ಕೋಪಗೊಂಡಿದ್ದ ಹಲವಾರು ಬಾರಿ ಬುದ್ದಿ ಹೇಳಿದ್ದರೂ ಆತನಿಗೆ ಕೇಳಿರಲಿಲ್ಲ. ಬೆಂಗಳೂರಿನಲ್ಲಿ ಹೌಸ್ ಶಿಫ್ಟಿಂಗ್ ಕೆಲಸ ಮಾಡುತ್ತಿದ್ದ ಗಿತ್ತರಾಜ ಗ್ರಾಮ ಬಂದಿದ್ದನ್ನು ತಿಳಿದ ರಾಮಣ್ಣ ತನ್ನ ಸಹಚರರೊಂದಿಗೆ ಸೇರಿ 18ರ ರಾತ್ರಿ ಗಿತ್ತರಾಜನಿಗೆ ಕಂಠಪೂರ್ತಿ ಮದ್ಯಸೇವನೆ ಮಾಡಿಸಿ ಕೊಲೆ ಮಾಡಿದ್ದಾನೆ ಎನ್ನಲಾಗಿದೆ.

## ಕಲ್ಯಾಣವೃಷ್ಠಿ ಮಹಾಭಿಯಾನ ಸ್ತೋತ್ರ ಸಮರ್ಪಣೆ



» ಚಿತ್ರದುರ್ಗ

ನಗರದ ಗಾಯತ್ರಿ ಕಲ್ಯಾಣ ಮಂಟಪದಲ್ಲಿ ಶುಕ್ರವಾರ ಭಾರತೀ ತೀರ್ಥ ಮಹಾಸ್ವಾಮಿಗಳವರ 50ನೇ ವರ್ಷದ ಸನ್ಯಾಸ ಸ್ವೀಕಾರ ಮಹೋತ್ಸವದ ಅಂಗವಾಗಿ ಕಲ್ಯಾಣವೃಷ್ಠಿ ಮಹಾಭಿಯಾನ–ಸ್ತೋತ್ರ ಸಮರ್ಪಣೆ ನಡೆಯಿತು. ಶಾಂಕರ ತತ್ವ ಪ್ರಸಾರ ಅಭಿಯಾನದ ವತಿಯಿಂದ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿಯೂ ಸಹ ಅನೇಕರು ಸ್ತೋತ್ರಗಳನ್ನು ಅಭ್ಯಾಸ ಮಾಡಿದ್ದು, ಶುಕ್ರವಾರ ಸಾಮೂಹಿಕವಾಗಿ ಸ್ತೋತ್ರ ಸಮರ್ಪಿಸಿದರು. ಬೆಲಗೂರು ಕ್ಷೇತ್ರದ ಮಾರುತಿ ಶರ್ಮರು ಸಾನಿಧ್ಯವಹಿಸಿ, ಅವರ ಸಮ್ಮುಖದಲ್ಲಿ ಸಾವಿರಾರು ಮಾತೆಯರು ಸ್ತೋತ್ರಗಳನ್ನು ಪಠಿಸಿದರು. ಶೃಂಗೇರಿ ಶಾರದ ಪೀಠದ ಪ್ರತಿನಿಧಿಯಾಗಿ ಉಮೇಶ್ ಹರಿಹರ ಅವರು ಭಾಗವಹಿಸಿ ಪ್ರಾಸ್ತಾವಿಕವಾಗಿ ಭಾಷಣ ಮಾಡಿದರು. ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಮಂಜುನಾಥ್ ಅವರು ಅಧ್ಯಕೀಯ ಮಾತುಗಳನ್ನಾಡಿದರು. ಮಾರುತಿ ಪ್ರಸಾದ್ ಅವರು ನಿರೂಪಣೆ ಮಾಡಿದರು. ಭಾರತೀ ತೀರ್ಥ ಮಹಾಸ್ವಾಮಿಗಳವರ 50ನೇ ವರ್ಷದ ಸನ್ಯಾಸ ಸ್ವೀಕಾರ ಮಹೋತ್ಸವದ ಅಂಗವಾಗಿ ಅನೇಕ ಧಾರ್ಮಿಕ, ಸಾಮಾಜಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ಲೋಕ ಕಲ್ಯಾಣಕ್ಕೋಸ್ಕರ ನಡೆದಿವೆ. ಇಂತಹ ಕಾರ್ಯಕ್ರಮಗಳಲ್ಲಿ ಶಾಂಕರ ಸ್ತೋತ್ರ ಪಠಣವೂ ವಿಶೇಷವಾಗಿದೆ. ಶಂಕರಚಾರ್ಯರು ರಚಿಸಿದ ಕಲ್ಯಾಣವೃಷ್ಠಿಸ್ತವ, ಶಿವಪಂಚಾಕ್ಷರ ನಕ್ಷತ್ರಮಾಲಾ, ಲಕ್ಷ್ಮೀ ನೃಸಿಂಹ ಕರಾವಲಂಬ ಸ್ತೋತ್ರಗಳ ಅಭಿಯಾನ ರಾಜ್ಯಾದ್ಯಂತ ನಡೆಯುತ್ತಿದೆ. ಸಾವಿರಾರು ಕೇಂದ್ರಗಳಲ್ಲಿ ಲಕ್ಷಾಂತರ ಮಾತೆಯರು ಮೂರು ಸ್ತೋತ್ರಗಳನ್ನು ಸಮರ್ಪಣೆ ಮಾಡುತ್ತಿದ್ದಾರೆ ಎಂದು ಶಾಂಕರ ತತ್ವ ಪ್ರಸಾರ ಅಭಿಯಾನದ ಜಿಲ್ಲಾ ಸಂಚಾಲಕಿ ಉಷಾ ಗುರುದತ್ತ ತಿಳಿಸಿದರು.


## ವೃತ್ತಿ ನಾಟಕ ಶಿಬಿರಕ್ಕೆ ಅರ್ಜಿ ಆಹ್ವಾನ

» ದಾವಣಗೆರೆ

ವೃತ್ತಿ ರಂಗಭೂಮಿ ರಂಗಾಯಣ ಕೇಂದ್ರ ಹಾಗೂ ಕರ್ನಾಟಕ ನಾಟಕ ಅಕಾಡೆಮಿಯ ಸಹಯೋಗದೊಂದಿಗೆ 5 ದಿನಗಳ ವೃತ್ತಿ ನಾಟಕ ರಚನಾ ಶಿಬಿರಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಶಿಬಿರದ ನಂತರ ತಿಂಗಳಲ್ಲಿ ಶಿಬಿರಾರ್ಥಿಗಳು ರಚಿಸಿದ ಆಯ್ಕೆಗೊಂಡ ನಾಟಕಗಳನ್ನು ಪುಸ್ತಕ ರೂಪದಲ್ಲಿ ಪ್ರಕಟಿಸಲಾಗುವುದು. ಸ್ಪಷ್ಟವಾಗಿ ಕನ್ನಡ ಓದಲು, ಬರೆಯಲು ಬರುವ ಮತ್ತು ರಂಗಸಾಹಿತ್ಯ ಕುರಿತು ಪ್ರಾಥಮಿಕ ಜ್ಞಾನವುಳ್ಳ 18 ವರ್ಷ ಮೇಲ್ಪಟ್ಟವರು ಸ್ವ–ಪರಿಚಯದೊಂದಿಗೆ 20 ಜನವರಿ 2025 ರೊಳಗೆ ವೃತ್ತಿ ರಂಗಭೂಮಿ ರಂಗಾಯಣ ಕೇಂದ್ರಕ್ಕೆ ಅರ್ಜಿ ಸಲ್ಲಿಸಬೇಕು. ಆಯ್ಕೆಯಾದ ಅಭ್ಯರ್ಥಿಗಳಿಗೆ ಊಟ, ವಸತಿ ಸೌಲಭ್ಯ ನೀಡಲಾಗುವುದು.

# ತ್ರಿವಿಧ ದಾಸೋಹಿ ಜಯದೇವ ಶ್ರೀ; ಸ್ವಾಮೀಜಿ

» ಚಿತ್ರದುರ್ಗ




ನಾಡಿನಲ್ಲಿತ್ರಿವಿಧರೀತಿಯದಾಸೋಹವನ್ನು ಮಾಡುವುದರ ಮೂಲಕ ಜನತೆಯನ್ನು ಉತ್ತಮವಾದ ದಾರಿಯತ್ತ ಕೊಂಡ್ಯೂದ ಕೀರ್ತಿ ಜಯದೇವ ಶ್ರೀಗಳಿಗೆ ಸಲ್ಲುತ್ತದೆ ಎಂದು ಹೆಬ್ಬಾಳ್‌ನ ವಿರಕ್ತ ಮಠದ ಮಹಾಂತ ರುದ್ರೇಶ್ವರ ಮಹಾಸ್ವಾಮಿಗಳು ತಿಳಿಸಿದರು.

ಜಿಲ್ಲಾ ಬೇಡ ಜಂಗಮ ಸಮಾಜ ಸಂಸ್ಥೆವತಿಯಿಂದ ಚಿತ್ರದುರ್ಗದ ಶ್ರೀ ಚಿನ್ಮೂಲಾದ್ರಿ ಬೃಹನ್ಮಠದ ತ್ರಿವಿಧ ದಾಸೋಹ ತತ್ವದ ರೂವಾರಿ ಶ್ರೀ ಮನ್ಮಹಾರಾಜ ನಿರಂಜನ ಜಗದ್ಗುರು ಶ್ರೀ ಜಯದೇವ ಮುರುಘರಾಜೇಂದ್ರ ಮಹಾಸ್ವಾಮಿಗಳ 150ನೇ ಜಯಂತೋತ್ಸವ ಶುಭ ಸಂದರ್ಭದಲ್ಲಿ ಚಿತ್ರದುರ್ಗದ ಮೆದೇಹಳ್ಳಿ ರಸ್ತೆಯ ರಾಷ್ಟ್ರೀಯ ಹೆದ್ದಾರಿ ಬ್ರಿಡ್ಜ್ ಸೇತುವೆಯ ಹತ್ತಿರ ಭಾನುವಾರ ಹಮ್ಮಿಕೊಂಡಿದ್ದ ಶ್ರೀ ಜಗದ್ಗುರು ಜಯದೇವ ವೃತ್ತ ಮತ್ತು ನಾಮಫಲಕ ಉದ್ಘಾಟನಾ ಸಮಾರಂಭದ ಸಾನಿಧ್ಯವಹಿಸಿ ಮಾತನಾಡಿದ ಶ್ರೀಗಳು,

ಅಂದಿನ ಕಾಲದಲ್ಲಿ ಶಿಕ್ಷಣ ಇಲ್ಲದೆ ಜನತೆ ಪರದಾಡುತ್ತಿದ್ದಾಗ ನಾಡಿನ ಎಲ್ಲಡೆ ಶಾಲೆಗಳನ್ನು ತೆರೆಯುವುದರ ಮೂಲಕ ಅವರಿಗೆ ಅನ್ನದಾನ ವಿದ್ಯಾದಾನ ಹಾಗೂ ಧರ್ಮದ ಬಗ್ಗೆ ತಿಳಿಸುವ ಕಾರ್ಯವನ್ನು ಜಯದೇವ ಶ್ರೀಗಳು ಮಾಡಿದ್ದರು. ಶ್ರೀಗಳು ಉದಾರವಾದ ಮನಸ್ಸನ್ನು ಹೊಂದಿದವರಾಗಿದ್ದರು ಕಷ್ಟ ಎಂದು ಬಂಧವರಿಗೆ ಸಹಾಯವನ್ನು ಮಾಡುವುದರ ಮೂಲಕ ಕೊಡುಗೈ ದಾನಿಗಳು ಎಂದು ಹೆಸರನ್ನು ಪಡೆದಿದ್ದರು. ಅವರ ಬದುಕು ಜೀವನ ಬೇರೆಯವರಿಗೆ ಅದರ್ಶಮಯವಾಗಿತ್ತು. ಸನ್ಯಾಸವನ್ನು ಸ್ವೀಕಾರ ಮಾಡಿದ ಸ್ವಾಮಿಗಳು ಸಮಾಜಕ್ಕೆ ಏನನ್ನು ನೀಡಬೇಕೂ ಅದನ್ನೆಲ್ಲಾವನ್ನು ಸಹಾ ನೀಡಿದ್ದಾರೆ. ನಿಷ್ಠೆಯಿಂದ ಸಮಾಜವನ್ನು ಕಟ್ಟಿದ ಕೀರ್ತಿ ಇವರಿಗೆ ಸಲ್ಲುತ್ತದೆ. ಅನ್ನದಾನ ಶಿಕ್ಷಣವನ್ನು ಜಾತಿ ಮತ ಬೇಧ ಇಲ್ಲದೆ ಎಲ್ಲರಿಗೂ ಸಹಾ ನೀಡಿದ ಕೀರ್ತಿ ಜಯದೇವ ಶ್ರೀಗಳಿಗೆ ಸಲ್ಲುತ್ತದೆ. ಮಠದ ಕೆರೆಯ ಮುಂಭಾಗದ ಕರೆಯಲ್ಲಿ ಜಯದೇವ ಮೂರ್ತಿಯನ್ನು ನಿರ್ಮಾಣ ಮಾಡಿ ಅದನ್ನು ಪ್ರವಾಸಿ ಕೇಂದ್ರವನ್ನಾಗಿ ಮಾಡಿ ಇದರ ಮಧ್ಯದಲ್ಲಿ ಜಯದೇವಶ್ರೀಗಳಕಂಚಿನಮೂರ್ತಿಯನ್ನು ಸ್ಥಾಪನೆ ಮಾಡಬೇಕಿದೆ ಎಂದು ಶ್ರೀಗಳು ತಿಳಿಸಿ ಅವರ ಆದರ್ಶ ಮತ್ತು ತತ್ವಗಳನ್ನು ನಾವುಗಳು ಮೈಗೂಡಿಸಿಕೊಳ್ಳಬೇಕಿದೆ ಎಂದರು.

ದಾವಣಗೆರೆಯ ಶ್ರೀ ವಿರಕ್ತ ಮಠದ ಡಾ. ಬಸವಪ್ರಭು ಮಹಾಸ್ವಾಮಿಗಳು ಮಾತನಾಡಿ, ಇಂದಿನ ಕಾಲದಲ್ಲಿ ಎಲ್ಲವೂ ಸಹಾ ಸುಲಭವಾಗಿ ಸಿಗುತ್ತದೆ ಆದರೆ ಜಯದೇವ ಶ್ರೀಗಳು ಇದ್ದ ಕಾಲದಲ್ಲಿ ಏನು ಇರಲಿಲ್ಲ, ಇಂದಿನ ಹಾಗೆ ಕಾರು, ಬಸ್ಸು ವಿಮಾನ, ಮೊಬೈಲ್ ಪೋನ್ ದೂರವಾಣಿ ಇರಲಿಲ್ಲ ಎಲ್ಲೆ ಹೋದರು ಸಹಾ ನಡೆದೇ ಇಲ್ಲದೆ ಎತ್ತಿನ ಗಾಡಿ ಅಥವಾ ಕುದುರೆ ಗಾಡಿಯ ಮೇಲೆ ಹೋಗಬೇಕಿತ್ತು ಇಂತಹ ಸಮಯದಲ್ಲಿ ಜಯದೇವ ಶ್ರೀಗಳು ನಾಡನ್ನು ಸುತ್ತುವುದರ ಮೂಲಕ ಸಮಾಜವನ್ನು ಕಟ್ಟಿದರು, ನಾಡಿನ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಶಿಕ್ಷಣ ಸಂಸ್ಥೇಗಳನ್ನು ತೆರೆಯುವುದರ ಮೂಲಕ ಬಡ ಮಕ್ಕಳಿಗೆ ಶಿಕ್ಷಣವನ್ನು ದೂರಕುವಂತೆ ಮಾಡಿದ ಕೀರ್ತಿ ಜಯದೇವ ಶ್ರೀಗಳಿಗೆ ಸಲುತ್ತದೆ. 53 ವರ್ಷ ಮುರುಘಾ ಮಠದ ಪೀಠಾಧೀಪತಿಗಳಾಗಿ ಉತ್ತಮವಾದ ಕಾರ್ಯವನ್ನು ಮಾಡಿದ್ದಾರೆ ಈ ಯುಗವನ್ನು ಸುವರ್ಣ ಯುಗ ಎಂದು ಕರೆಯಲಾಯಿತು ಎಂದರು.

ಶ್ರೀಗಳು ಪೀಠಾಧ್ಯಕ್ಷರಾದ ಸಮಯದಲ್ಲಿ ಮುರುಘಾ ಮಠ ಸಾಲದಲ್ಲಿ ಇತ್ತು ಅದನ್ನು ಪೀಠಾಧ್ಯಕ್ಷರಾಗಿ ಸಾಲವನ್ನು ತೀರಿಸುವುದರ ಮೂಲಕ ಮಠವನ್ನು ನವ ಕೋಟಿ ನಾರಾಯಣ ಎಂಬಂತೆ ಮಾಡಿದರು. ಸಮಾಜದ ಪ್ರಗತಿಗೆ ಸುತ್ತು ಕಟ್ಟು ಎಂದು ಮುರುಘೇಶ ಸೂಚನೆ ನೀಡಿದಂತೆ ಜಯದೇವ ಶ್ರೀಗಳು ದೇಶವನ್ನು ಸುತ್ತುವುದರ ಮೂಲಕ ಬಡತನ,ಆಸಮಾನತೆ, ಆನಕ್ಷರತೆ, ದರಿದ್ರತನ, ಕಿತ್ತು ಹಾಕಿ ಶಿಕ್ಷಣವನ್ನು ನೀಡಿದರು. ಬದುಕನ್ನು ಉದ್ದಾರ ಮಾಡಿದವರ ಜಯದೇವ ಶ್ರೀಗಳು ಮಹಾತ್ಮಗಾಂಧಿಜೀಯವರು ಶ್ರೀಗಳನ್ನು ಬೇಟಿ ಮಾಡಿ ಇವರ ಕಾರ್ಯವನ್ನು ಶ್ಲಾಘಿಸಿ ಕರ್ನಾಟಕ ಏಕೀಕರಣಕ್ಕೆ ಜಯದೇವ ಶ್ರೀಗಳ ಕೊಡುಗೆಯೂ ಸಹಾ ಹೆಚ್ಚಿನ ರೀತಿಯಲ್ಲಿ ಇದೆ. ಶ್ರೀಗಳು ಸ್ಥಾಪನೆ ಮಾಡಿದ ಹಾಸ್ಟಲ್‌ಗಳಲ್ಲಿ ಇಂದಿನ ಉನ್ನತ ಸ್ಥಾನವನ್ನು ಪಡೆದ ಹಲವಾರು ಜನತೆ ಓದಿದ್ದಾರೆ. ತ್ರಿವಿಧ ದಾಸೋಹಕ್ಕೆ ಪಿತಮಾಹ ಎಂದರೆ ಜಯದೇವ ಶ್ರೀಗಳು ತ್ರಿವಿಧ ದಾಸೋಹಕ್ಕೆ ಅರ್ಥವನ್ನು ನೀಡಿದರು ಜಯದೇವ ಶ್ರೀಗಳು, ಆನ್ನ, ಅಕ್ಷರ, ಆಶ್ರಯ ದಾಸೋಹ ತ್ರಿವಿಧ ಧಾಸೋಹದ ರೂವಾರಿಗಳಾಗಿದ್ದಾರೆ. ಇಂದು ಅವರು ನಮ್ಮ ಬಳಿ ಇಲ್ಲ ಆದರೆ ಅವರು ಮಾಡಿದ ಸಮಾಜ ಸೇವೆ ಇಂದಿಗೂ ಸಹಾ ನಮ್ಮ ಬಳಿ ಸಾಕ್ಷಿಯಾಗಿದೆ,

ಕಾರ್ಯಕ್ರಮದಲ್ಲಿ ಸಂಸದರಾದ ಗೋವಿಂದ ಕಾರಜೋಳ, ಶಾಸಕರಾದ ಕೆ.ಸಿ. ವೀರೇಂದ್ರ (ಪಪ್ಪಿ), ವಿಧಾನ ಪರಿಷತ್ತು ಸದಸ್ಯರಾದ ಕೆ.ಎಸ್.ನವೀನ್, ಮಾಜಿ ಶಾಸಕರುಗಳಾದ ಎಸ್.ಕೆ.ಬಸವರಾಜನ್, ನಗರಸಭೆ ಅಧ್ಯಕ್ಷರಾದ ಶ್ರೀಮತಿ ಸವಿತಾ ರಘು, ಉಪಾಧ್ಯಕ್ಷರಾದ ಶ್ರೀಮತಿ ಶ್ರೀದೇವಿ ಚಕ್ರವರ್ತಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಎಂ.ಕೆ. ತಾಜ್‌ಪೀರ್, ಆಯುಕ್ತರಾದ ಎಂ.ಎಸ್. ಸೋಮಶೇಖರ್, ಜಿಲ್ಲಾ ಬೇಡ ಜಂಗಮ ಸಮಾಜ ಸಂಸ್ಥೆಯ ಅಧ್ಯಕ್ಷರಾದ ಸೋಮಶೇಖರ್ ಮಂಡಿಮಠ್, ನಗರಸಭೆಯ ಸ್ಥಾಯಿ ಸಮಿತಿಯ ಮಾಜಿ ಅಧ್ಯಕ್ಷರಾದ ಕೆ.ಬಿ.ಸುರೇಶ್, ಅ.ಭಾ.ವೀ. ಮಹಾಸಭಾದ ಅಧ್ಯಕ್ಷರಾದ ಮಹಡಿ ಶಿವಮೂರ್ತಿ, ವೀರಶೈವ ಸಮಾಜದ ಅಧ್ಯಕ್ಷರಾದ ಹೆಚ್.ಎನ್.ತಿಪ್ಪೇಸ್ವಾಮಿ, ಮಲ್ಲಿಕಾರ್ಜನ್, ಜ್ಞಾನ ಮೂರ್ತಿ, ವಿದ್ಯಾ ವಿಕಾಸನ ವಿಜಯಕುಮಾರ್, ಷಣ್ಮುಖಪ್ಪ ಶರಣಯ್ಯ, ಸೇರಿದಂತೆ ಇತರರು ಭಾಗವಹಿಸಿದ್ದರು,

# ಜಿಲ್ಲಾಸ್ಪತ್ರೆಗೆ ಜಿಲ್ಲಾ ನ್ಯಾಯಾಧೀಶರ ದಿಢೀರ್ ಭೇಟಿ

» ಚಿತ್ರದುರ್ಗ



ಚಿತ್ರದುರ್ಗ ನಗರದ ಜಿಲ್ಲಾಸ್ಪತ್ರೆಗೆ ಶನಿವಾರ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರೋಣ ವಾಸುದೇವ್ ಹಾಗೂ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಎಂ.ವಿಜಯ್ ಅವರು ದಿಢೀರ್ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಜಿಲ್ಲಾಸ್ಪತ್ರೆಯ ಎಲ್ಲ ವಾರ್ಡ್‍ಗಳಿಗೂ ಖುದ್ದಾಗಿ ಭೇಟಿ ನೀಡಿ, ರೋಗಿಗಳ ಆರೋಗ್ಯ ವಿಚಾರಿಸಿದರು. ಜಿಲ್ಲಾಸ್ಪತ್ರೆಯ ಕಾರ್ಯವೈಖರಿ, ಅಲ್ಲಿನ ವ್ಯವಸ್ಥೆಯ ಬಗ್ಗೆ ಪರಿಶೀಲಿಸಿ, ವೈದ್ಯರು ಹಾಗೂ ರೋಗಿಗಳಿಂದ ಆಸ್ಪತ್ರೆಯ ಕುರಿತು ಮಾಹಿತಿ ಪಡೆದರು.

ಜಿಲ್ಲಾಸ್ಪತ್ರೆಯ ಹೊರರೋಗಿಗಳ ವಿಭಾಗದ ಅರ್ಥೋಪೆಡಿಕ್ ಒಪಿಡಿ, ಸರ್ಜಿಕಲ್ ಒಪಿಡಿ, ಫಿಜಿಯೋಥೆರಪಿ, ಮಹಿಳೆಯರು ಹಾಗೂ ಪುರಷರ ತುರ್ತು ಚಿಕಿತ್ಸಾ ವಾರ್ಡ್, ಶಸ್ತ್ರಚಿಕಿತ್ಸಾ ವಿಭಾಗ, ಕಣ್ಣಿನ ಶಸ್ತ್ರಚಿಕಿತ್ಸಾ ವಿಭಾಗ, ಹೈಟೆಕ್ ಲ್ಯಾಬ್, ಯುರಾಲಜಿ ಹೊರರೋಗಿಗಳ ವಿಭಾಗ, ಕ್ಷ–ಕಿರಣ ವಿಭಾಗ, ರಕ್ತನಿಧಿ ಕೇಂದ್ರ ಹಾಗೂ ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ಎಲ್ಲ ವಿಭಾಗ ಹಾಗೂ ವಾರ್ಡ್‍ಗಳಿಗೂ ಹಾಗೂ ಅಡುಗೆ ಮನೆಗೆ ಭೇಟಿ ನೀಡಿ ಅಲ್ಲಿನ ವ್ಯವಸ್ಥೆಯ ಕುರಿತು ವೀಕ್ಷಣೆ ಮಾಡಿದರು.

ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರೋಣ ವಾಸುದೇವ್, ಜಿಲ್ಲಾಸ್ಪತ್ರೆಯ ಎಲ್ಲ ವಿಭಾಗಗಳಿಗೂ ಭೇಟಿ ನೀಡಿ, ಪರಿಶೀಲನೆ ನಡೆಸಿದ್ದು, ಆಸ್ಪತ್ರೆಯ ಕೆಲವು ವಿಭಾಗಗಳಲ್ಲಿ ಸುಧಾರಣೆ ಆಗಬೇಕಿದೆ. ಇನ್ನೂ ಕೆಲವು ವಿಭಾಗಗಳು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿವೆ. ಆದಾಗ್ಯೂ ವಿವಿಧ ವಿಭಾಗಗಳಲ್ಲಿ ಇನ್ನಷ್ಟು ಸುಧಾರಣೆ ಕೈಗೊಳ್ಳಬೇಕಾದ ಅಗತ್ಯವಿದೆ. ಈ ಕುರಿತಂತೆ ಜಿಲ್ಲಾ ಶಸ್ತ್ರಚಿಕಿತ್ಸಕರಿಗೆ ಸಲಹೆ, ಸೂಚನೆಗಳನ್ನು ನೀಡಲಾಗಿದೆ ಎಂದು ಹೇಳಿದರು.

ಆಸ್ಪತ್ರೆಗೆ ಆಗಿಂದಾಗೆ ಭೇಟಿ ನೀಡಿ, ಜಿಲ್ಲಾಸ್ಪತ್ರೆಯ ಕಾರ್ಯವೈಖರಿ ಕುರಿತು ಸಾರ್ವಜನಿಕರಿಂದ ಮಾಹಿತಿ ಸಂಗ್ರಹಿಸಿ, ಸಾರ್ವಜನಿಕರಿಗೆ ಸರಿಯಾಗಿ ಚಿಕಿತ್ಸಾ ಸೌಲಭ್ಯಗಳು ಉಚಿತವಾಗಿ ದೊರೆಯುತ್ತಿವೆಯೋ, ಇಲ್ಲವೋ ಎಂಬುದನ್ನು ಪರಿಶೀಲನೆ ಮಾಡಲಾಗುತ್ತಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಜಿಲ್ಲಾಸ್ಪತ್ರೆಯ ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ, ನಿವಾಸಿ ವೈದ್ಯಾಧಿಕಾರಿ ಡಾ.ಆನಂದ ಪ್ರಕಾಶ್ ಸೇರಿದಂತೆ ಜಿಲ್ಲಾಸ್ಪತ್ರೆಯ ವೈದ್ಯರು ಹಾಗೂ ಸಿಬ್ಬಂದಿ ಇದ್ದರು.

## ದಾವಣಗೆರೆಯಲ್ಲಿ ಜನವರಿ 4, 5 ರಂದು ರಾಜ್ಯ ಮಟ್ಟದ ಯುವಜನೋತ್ಸವ



» ದಾವಣಗೆರೆ

ಯುವ ಜನಸೇವಾ ಹಾಗೂ ಕ್ರೀಡಾ ಇಲಾಖೆಯಿಂದ ನಡೆಸುವ ರಾಜ್ಯ ಮಟ್ಟದ ಯುವಜನೋತ್ಸವ ಕಾರ್ಯಕ್ರಮವನ್ನು 2025 ರ ಜನವರಿ 4 ಮತ್ತು 5 ದಾವಣಗೆರೆ ನಗರದಲ್ಲಿ ನಡೆಯಲಿದೆ ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದರು. ಅವರು ಜಿಲ್ಲಾಡಳಿತ ಭವನದ ತುಂಗಭದ್ರಾ ಸಭಾಂಗಣದಲ್ಲಿ ಯುವಜನೋತ್ಸವ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಸಿದ್ದತಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ರಾಜ್ಯ ಮಟ್ಟದ ಕಾರ್ಯಕ್ರಮ ಇದಾಗಿದ್ದು ರಾಜ್ಯದ ಎಲ್ಲಾ ಜಿಲ್ಲೆಗಳಿಂದ ಯುವಸ್ಪರ್ಧಾಳುಗಳು ಭಾಗವಹಿಸುವರು. ಈ ಸ್ಪರ್ಧೆಯಲ್ಲಿ ಜಾನಪದ ನೃತ್ಯ, ಜಾನಪದ ಗೀತೆ, ವಿಜ್ಞಾನ ವಸ್ತು ಪ್ರದರ್ಶನ, ಕವನ ರಚನೆ, ಪ್ರಬಂಧ, ಕಥೆ ಬರೆಯುವುದು, ಚಿತ್ರಕಲೆ, ಘೋಷಣ ಸ್ಪರ್ಧೆಗಳು ನಡೆಯಲಿದೆ. ನಗರದ ಬಿಐಇಟಿ ಕಾಲೇಜಿನ ಎಸ್.ಎಸ್.ಎಂ ಸಾಂಸ್ಕೃತಿಕ ಭವನ, ಬಾಪೂಜಿ ಎಂ.ಬಿ.ಎ ಕಾಲೇಜು ಸಭಾಂಗಣ, ಎಂಬಿಎ ಮೈದಾನದ ಎಸ್.ಎಸ್.ನ್ಯಾಷನಲ್ ಪಬ್ಲಿಕ್ ಸ್ಕೂಲ್, ಎಂ.ಬಿ.ಎ ಕಾಲೇಜಿನ ಕೊಠಡಿ, ಲಲಿತ ಕಲಾ ಮಹಾವಿದ್ಯಾಲಯ ಸೇರಿದಂತೆ ಎಂಬಿಎ ಮೈದಾನದಲ್ಲಿ ಕಾರ್ಯಕ್ರಮಗಳು ನಡೆಯಲಿವೆ. ಕಾರ್ಯಕ್ರಮ ಆಯೋಜನೆಗೆ ವಿವಿಧ ಸಮಿತಿಗಳ ರಚನೆ; ರಾಜ್ಯ ಮಟ್ಟದ ಯುವಜನೋತ್ಸವವನ್ನು ಅದ್ದೂರಿಯಾಗಿ ನಡೆಸಲು ಸಿದ್ದತೆಗಾಗಿ ವೇದಿಕೆ, ಸಾಂಸ್ಕೃತಿಕ, ಸಾರಿಗೆ, ಪ್ರಚಾರ, ವಸತಿ, ಸ್ವಾಗತ, ನೊಂದಣಿ ಸೇರಿದಂತೆ ಎಲ್ಲಾ ವ್ಯವಸ್ಥೆಗಳನ್ನು ಅಚ್ಚುಕಟ್ಟಾಗಿ ನಡೆಸಲು ವಿವಿಧ ಸಮಿತಿಗಳನ್ನು ರಚಿಸಲಾಗಿದೆ. ಎಲ್ಲಾ ಸಮಿತಿಗಳು ಸಿದ್ದತೆ ನಡೆಸಿದ್ದು ಆದಷ್ಟು ಬೇಗ ಕಾರ್ಯಕ್ರಮದ ಲಾಂಛನವನ್ನು ಬಿಡುಗಡೆ ಮಾಡಲಾಗುತ್ತದೆ ಎಂದರು. ರಾಜ್ಯ ಮಟ್ಟದ ಕಾರ್ಯಕ್ರಮ ಇದಾಗಿರುವುದರಿಂದ ಶಿಷ್ಟಾಚಾರದನ್ವಯ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತದೆ. ಸಾರ್ವಜನಿಕರು, ವಿದ್ಯಾರ್ಥಿಗಳು ಹಾಗೂ ದಾವಣಗೆರೆ ನಾಗರಿಕರು ಕಾರ್ಯಕ್ರಮ ವೀಕ್ಷಣೆಗಾಗಿ ನಗರ ಸಾರಿಗೆಯಿಂದ ಬಸ್ ವ್ಯವಸ್ಥೆಯನ್ನು ಕೈಗೊಳ್ಳಲಾಗುತ್ತದೆ ಎಂದರು. ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್, ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್, ಪಾಲಿಕೆ ಆಯುಕ್ತರಾದ ರೇಣುಕಾ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

## ನೀರಿನ ಬಳಕೆಯ ಬಿಲ್ಲನ್ನು ಸೇವಾ ಕೇಂದ್ರಗಳಲ್ಲಿ ಪಾವತಿಸಿ

ದಾವಣಗೆರೆ : ಕೆಯುಐಡಿಎಫ್‌ಸಿ ವತಿಯಿಂದ ನಗರದಲ್ಲಿ ಜಲಸಿರಿ ಯೋಜನೆಯನ್ನು ಕೈಗೊಳ್ಳಲಾಗಿದ್ದು, ಅದರಂತೆ ನೀರಿನ ಬಳಕೆಯ ಅನುಸಾರ ಬಿಲ್ಲನ್ನು ನೀಡಲಾಗುತ್ತಿದೆ. ಬಿಲ್ ಮೊತ್ತವನ್ನು ಸೇವಾ ಕೇಂದ್ರಗಳಲ್ಲಿ ಹಾಗೂ ಆನ್‌ಲೈನ್ ಮೂಲಕ ಪಾವತಿಸಬಹುದಾಗಿದೆ. ಈಗಾಗಲೇ ಬಿಲ್ಲಿನಲ್ಲಿ ನಮೂದಿಸಿರುವ ನೀರಿನ ಶುಲ್ಕವನ್ನು ಮಹಾನಗರಪಾಲಿಕೆಯ ಆವರಣದಲ್ಲಿರುವ ಗ್ರಾಹಕರ ಸೇವಾ ಕೇಂದ್ರದಲ್ಲಿ ಅಥವಾ ನಿಟ್ಟುವಳ್ಳಿ ಉದ್ಯಾನವನದಲ್ಲಿರುವ ಗ್ರಾಹಕರ ಸೇವಾ ಕೇಂದ್ರದಲ್ಲಿ ನಗದು ರೂಪದಲ್ಲಿ ಪಾವತಿಸಬಹುದು. ಆನ್‌ಲೈನ್ ಮುಖಾಂತರ ಕೂಡ ಪಾವತಿಸಲು ಅವಕಾಶವಿದ್ದು ಜಲಸಿರಿ ಅಪ್ಲಿಕೇಷನ್ www.davangere water.co.in ಜಾಲತಾಣದ ಮುಖಾಂತರವೂ ಪಾವತಿಸಬಹುದು.

ಪ್ರಮುಖ ಸುದ್ದಿ

# ಡಯಾಲಿಸಿಸ್ ರೋಗಿಗಳಿಗೆ ಶುದ್ದವಾದ ನೀರಿನ ಅವಶ್ಯಕತೆಯಿದೆ

» ಚಿತ್ರದುರ್ಗ



ಕಿಡ್ನಿ ವೈಫಲ್ಯದಿಂದ ಡಯಾಲಿಸಿಸ್‌ಗೆ ಒಳಗಾಗುವ ರೋಗಿಗಳಿಗೆ ಪರಿಶುದ್ದವಾದ ನೀರಿನ ಅವಶ್ಯಕತೆಯಿದೆ ಎನ್ನುವುದನ್ನು ಮನಗಂಡು ಮಳೆ ನೀರು ಕೊಯ್ಲು

ತಜ್ಞ ಎನ್.ಜೆ.ದೇವರಾಜರೆಡ್ಡಿರವರು ಯಾವುದೆ ಫಲಾಪೇಕ್ಷೆಯಿಲ್ಲದೆ ರೋಟರಿ ಸೇವಾ ಭವನದಲ್ಲಿ 45 ಸಾವಿರ ಲೀಟರ್ ಸಾಮರ್ಥ್ಯದ ಮಳೆ ನೀರು ಕೊಯ್ಲು ಹಾಗೂ ಕೊಳವೆಬಾವಿ ಜಲ ಮರುಪೂರಣ ಘಟಕ ತೊಟ್ಟಿಯನ್ನು ನಿರ್ಮಿಸಿ ಮಾನವೀಯತೆ ಮೆರೆದಿದ್ದಾರೆ. ಚಿತ್ರದುರ್ಗ ರೋಟರಿ ಕ್ಲಬ್ ಆರಂಭಗೊಂಡ 60 ವರ್ಷದ ಇತಿಹಾಸದಲ್ಲಿ ಡಯಾಲಿಸಿಸ್ ಕೇಂದ್ರ ತೆರೆಯುವ ಕನಸಿನ ಯೋಜನೆ ಇದಾಗಿದ್ದು, ಡಯಾಲಿಸಿಸ್ ರೋಗಿಗಳಿಗೆ ನೆರವಾಗುವ ಉದ್ದೇಶದಿಂದ ಶಾಂತಿಸಾಗರದಿಂದ ಪೂರೈಕೆಯಾಗುವ ನೀರಿನಲ್ಲಿ ಹದಿನೈದು ಸಾವಿರ ಲೀಟರ್ ಸಂಗ್ರಹಿಸಿಕೊಳ್ಳುವಷ್ಟು ವಿಶಾಲವಾದ ತೊಟ್ಟಿಯನ್ನು ಶ್ರಮದಾನದ ಮೂಲಕ ಎನ್.ಜೆ.ದೇವರಾಜರಡ್ಡಿ ನಿರ್ಮಿಸಿದ್ದಾರೆ.

ಡಯಾಲಿಸಿಸ್ ರೋಗಿಗಳಿಗೆ ಉಚಿತವಾಗಿ ಚಿಕಿತ್ಸೆ ಸಿಗಲಿ ಎನ್ನುವ ಸದುದ್ದೇಶದಿಂದ ಚಿತ್ರದುರ್ಗ ರೋಟರಿ ಕ್ಲಬ್‌ನವರು ನಾಲ್ಕು ಕೋಟಿ ರೂ.ವೆಚ್ಚದಲ್ಲಿ ನಿರ್ಮಿಸುತ್ತಿರುವ ಕಟ್ಟಡಕ್ಕೆ ಸಾರ್ವಜನಿಕರ ದೇಣಿಗೆಯೂ ಸಿಕ್ಕಿದೆ. ಇಲ್ಲಿ ಮಳೆ ನೀರು ಕೊಯ್ಲಿಗೆ ಒತ್ತು ಕೊಟ್ಟಿರುವ ಎನ್.ಜೆ.ದೇವರಾಜರೆಡ್ಡಿರವರು ನಿಸ್ವಾರ್ಥವಾಗಿ ನೀರಿನ ತೊಟ್ಟಿಯನ್ನು ನಿರ್ಮಿಸಿ ಚಿತ್ರದುರ್ಗ ರೋಟರಿ ಕ್ಲಬ್‌ನ ಉಚಿತ ಸೇವಾ ಕಾರ್ಯಕ್ಕೆ ಕೈಜೋಡಿಸಿದ್ದಾರೆ.

ಡಯಾಲಿಸಿಸ್, ಫಿಜಿಯೋಥೆರಪಿ, ಬ್ಲಡ್ ಮತ್ತು ಐ ಬ್ಯಾಂಕ್ ಓ.ಪಿ.ಡಿ. ವೈದ್ಯರು, ಹಾಗೂ ಸಿಬ್ಬಂದಿ ಡಯಾಲಿಸಿಸ್ ರೋಗಿಗಳ ಚಿಕಿತ್ಸೆಗೆ ಸದಾ ಸಿದ್ದರಿರುತ್ತಾರೆ. ಸಿ.ಎ.ಸೈಟ್ ಖರೀಧಿಸಿ 42 ಚದರ ಅಡಿಯಲ್ಲಿ ಎರಡುವರೆ ವರ್ಷದ ಹಿಂದೆ ಆರಂಭಗೊಂಡ ಕಟ್ಟಡ ಕಾಮಗಾರಿ ಫೆ.15 ರೊಳಗೆ ಪೂರ್ಣಗೊಂಡು ಸಾರ್ವಜನಿಕ ಸೇವೆಗೆ ಲೋಕಾರ್ಪಣೆಗೊಳ್ಳಲಿದೆ. ರಾಜಧಾನಿ ಬೆಂಗಳೂರಿನ ಅಪೋಲೊ ಆಸ್ಪತ್ರೆಯಲ್ಲಿ ದೊರಕುವಂತ ಸುಸಜ್ಜಿತ ಯಂತ್ರಗಳ ಸಹಾಯದಿಂದ ಡಯಾಲಿಸಿಸ್ ರೋಗಿಗಳಿಗೆ ಗುಣಮಟ್ಟದ ಚಿಕಿತ್ಸೆ ನೀಡುವುದಕ್ಕಾಗಿ ಸಿದ್ದಗೊಳ್ಳುತ್ತಿರುವ ಡಯಾಲಿಸಿಸ್ ಕೇಂದ್ರದ ಪ್ರಯೋಜನವನ್ನು ಸಾರ್ವಜನಿಕರುಪಡೆದುಕೊಳ್ಳಬಹುದಾಗಿದೆ ಎಂದು ರೋಟರಿ ಕ್ಲಬ್ ಚಿತ್ರದುರ್ಗದ ಪದಾಧಿಕಾರಿಗಳು ಮನವಿ ಮಾಡಿದ್ದಾರೆ.

ರೋಟರಿ ಕ್ಲಬ್ ಚಿತ್ರದುರ್ಗ ಅಧ್ಯಕ್ಷ ವೀರಣ್ಣ, ಕಾರ್ಯದರ್ಶಿ ಶಿವಣ್ಣ, ಪಿ.ಡಿ.ಜಿ.ಮಧುಪ್ರಸಾದ್, ರೋಟರಿ ಕ್ಲಬ್ ಫೋರ್ಟ್‌ಅಧ್ಯಕ್ಷಮಂಜುನಾಥ್‌ಭಾಗವತ್, ಇನ್ನರ್‌ವೀಲ್ ಕ್ಲಬ್ ಸದಸ್ಯೆ ಗಾಯತ್ರಿ ಶಿವರಾಂ, ರೋಟರಿ ಕ್ಲಬ್ ಫೋರ್ಟ್ ಕಾರ್ಯದರ್ಶಿ ಶಿವರಾಂ, ರೋಟರಿ ಕ್ಲಬ್ ಸದಸ್ಯರು ಹಾಗೂ ಮಳೆನೀರು ಕೊಯ್ಲು ತಜ್ಞ ಎನ್.ಜೆ.ದೇವರಾಜರೆಡ್ಡಿರವರು ಎಸ್.ಆರ್.ಬಿ.ಎಂ.ಎಸ್. ರೋಟರಿ ಸೇವಾ ಭವನದಲ್ಲಿ ನಿರ್ಮಾಣವಾಗಿರುವ ಡಯಾಲಿಸಿಸ್ ಕೇಂದ್ರದ ಮಳೆನೀರು ಕೊಯ್ಲು ಹಾಗೂ ಕೊಳವೆಬಾವಿ ಜಲ ಮರುಪೂರಣ ಘಟಕ ವೀಕ್ಷಿಸಿದರು.

## ಫಾಸ್ಟ್ ನ್ಯೂಸ್

### ಕ್ಯಾಲೆಂಡರ್ ಬಿಡುಗಡೆ

» ಚಿತ್ರದುರ್ಗ



ಜಿಲ್ಲಾ ಬೇಡ ಜಂಗಮ ಸಮಾಜ ಸಂಸ್ಥೆವತಿಯಿಂದ 2025ನೇ ಸಾಲಿನ ದಿನದರ್ಶಿಕೆಯನ್ನು ಇಂದು ಚಿತ್ರದುರ್ಗದ ಶ್ರೀ ಚಿನ್ಮೂಲಾದ್ರಿ ಬೃಹನ್ಮಠದ ತ್ರಿವಿಧ ದಾಸೋಹ ತತ್ವದ ರೂವಾರಿ ಶ್ರೀ ಮನ್ಮಹಾರಾಜ ನಿರಂಜನ ಜಗದ್ಗುರು ಶ್ರೀ ಜಯದೇವ ಮುರುಘರಾಜೇಂದ್ರ ಮಹಾಸ್ವಾಮಿಗಳ 150ನೇ ಜಯಂತೋತ್ಸವ ಶುಭ ಸಂದರ್ಭದಲ್ಲಿ ಚಿತ್ರದುರ್ಗದ ಮೆದೇಹಳ್ಳಿ ರಸ್ತೆಯ ರಾಷ್ಟ್ರೀಯ ಹೆದ್ದಾರಿ ಬ್ರಿಡ್ಜ್ ಸೇತುವೆಯ ಹತ್ತಿರ ಶ್ರೀ ಜಗದ್ಗುರು ಜಯದೇವ ವೃತ್ತ ಮತ್ತು ನಾಮಫಲಕ ಉದ್ಘಾಟನಾ ಸಮಾರಂಭದಲ್ಲಿ ಹೆಬ್ಬಾಳ್‌ನ ವಿರಕ್ತ ಮಠದ ಮಹಾಂತ ರುದ್ರೇಶ್ವರ ಮಹಾಸ್ವಾಮಿಗಳು ಬಿಡುಗಡೆಗೊಳಿಸಿದರು. ಈ ಸಂದರ್ಭದಲ್ಲಿ ಬಾಪೂಜಿ ಸಮೂಹ ಸಂಸ್ಥೆಗಳು ಮತ್ತು ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಅಧ್ಯಕ್ಷರಾದ ಡಾ. ಕೆ. ಎಂ. ವೀರೇಶ್, ನಗರಸಭೆಯ ಸ್ಥಾಯಿ ಸಮಿತಿಯ ಮಾಜಿ ಅಧ್ಯಕ್ಷರಾದ ಸಮಾಜದ ಸಂಘಟನಾ ಕಾರ್ಯದರ್ಶಿ ಕೆ. ಬಿ. ಸುರೇಶ್, ಅ.ಭಾ.ವೀ. ಮಹಾ ಸಭಾದ ಅಧ್ಯಕ್ಷರಾದ ಮಹಡಿ ಶಿವಮೂರ್ತಿ, ಜಿಲ್ಲಾ ಬೇಡ ಜಂಗಮ ಸಮಾಜದ ಪ್ರಧಾನ ಕಾರ್ಯದರ್ಶಿ ಷಡಾಕ್ಷರಯ್ಯ, ಸಹ ಕಾರ್ಯದರ್ಶಿ ಶರಣಯ್ಯ, ರಂಗ ಕಲಾವಿದ ಗಣೇಶಯ್ಯ, ರಾಜೇಶ್, ಜಾಲಿಕಟ್ಟೆ ರುದ್ರಣ್ಣ, ರುದ್ರೇಶ್ ಐಗಳ್ ಶಿಕ್ಷಕರಾದ ಚನ್ನಯ್ಯ ನಿವೃತ್ತ ಪ್ರಚಾರ್ಯರು ಮುರುಗೇಂದ್ರಯ್ಯ ಉಪಸ್ಥಿತರಿದ್ದರು.

### ಅಂತರಾಷ್ಟ್ರೀಯ ಧ್ಯಾನ ದಿನ : ಧ್ಯಾನ ಮನುಷ್ಯನ ಜೀವನ ಪರಿವರ್ತನೆಯ ಸಾಧನ : ವಿಮಲಕ್ಕ.




» ಚಳ್ಳಕೆರೆ

ಆಧುನಿಕ ಜೀವನದ ಮನುಷ್ಯರಲ್ಲಿ ಒತ್ತಡ, ಭಯ, ಆತಂಕ, ಮಾನಸಿಕಖಿನ್ನತೆ ದೂರ ಮಾಡಲು ಪ್ರತಿನಿತ್ಯ ಯೋಗ, ಧ್ಯಾನ ಅವಶ್ಯಕ ಎಂದು ಬ್ರಹ್ಮಕುಮಾರಿಈಶ್ವರಿವಿದ್ಯಾಲಯದ ನಿರ್ದೇಶಕಿ ವಿಮಲಕ್ಕ ತಿಳಿಸಿದರು.

ಅವರು, ಕೇಂದ್ರದಲ್ಲಿ ಅಂತರಾಷ್ಟ್ರೀಯ ಧ್ಯಾನ ದಿನದ ಅಂಗವಾಗಿ ಏರ್ಪಡಿಸಿದ್ದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಪ್ರತಿಯೊಬ್ಬ ಮನುಷ್ಯನಲ್ಲಿ ಜೀವನದಲ್ಲಿ ಧ್ಯಾನ ಅತಿಮುಖ್ಯ ಪಾತ್ರವಹಿಸುತ್ತದೆ. ನಾವು ಮಾಡುವ ನಿತ್ಯದ ಕಾರ್ಯಗಳಲ್ಲಿ ಧ್ಯಾನವನ್ನು ಒಂದು ಭಾಗವಾಗಿಸಿಕೊಂಡಾಗ ಆರೋಗ್ಯವಂತಹ ಸಮಾಜ ನಿರ್ಮಾಣ ಮಾಡಲು ಸಾಧ್ಯವಾಗುತ್ತದೆ. ಧ್ಯಾನದಿಂದ ಮನಸ್ಸಿಗೆ ಶಾಂತಿ, ನೆಮ್ಮದಿ ಅನುಭವದ ಜೊತೆಗೆ ಆಂತರಿಕ ಶಕ್ತಿ, ಸಾಮರ್ಥ್ಯ, ಶಾರೀರಿಕ ಮಾನಸಿಕ ಆರೋಗ್ಯ ವೃದ್ದಿಗೆ ಸಹಕಾರಿಯಾಗಲಿದೆ. ಒಂದು ದಿನದ ಧ್ಯಾನ ನಿಮ್ಮ ಪೂರ್ಣ ಬದುಕನ್ನು ಬದಲಿಸಲಿದೆ. ಏಕಾಗ್ರತೆ ಹೆಚ್ಚಳವಾಗಿ ನೀವು ಮಾಡುವ ಕೆಲಸದಲ್ಲಿ ಸ್ವಪರಿವರ್ತನೆ, ಸ್ವಯಂಅರಿವು ಉಂಟಾಗಲಿದೆ ಎಂದರು. ಎಸ್‌ಓಎಸ್ ನಾಯಕ್, ಶಿವಮೂರ್ತಿ, ಓಬಳೇಶ್, ರಂಗಸ್ವಾಮಿ, ಲಲಿತ, ತಿಪ್ಪಮ್ಮ, ಪ್ರತಿಮಾ, ಸತ್ಯನಾರಾಯಣ, ತಿಪ್ಪೇಸ್ವಾಮಿ, ರತ್ನವೀರಪ್ಪ, ಸಕ್ಕುಬಾಯಿ, ರಾಧ, ಸಂಧ್ಯಾ, ವಿಶ್ವಕುಮಾರ್, ಗುರುಸಿದ್ದಪ್ಪ, ಬಿ.ಕೆ.ಇಂಧು, ಮುಂತಾದವರು ಉಪಸ್ಥಿತರಿದ್ದರು.

### ಭತ್ತಾ ಕಟಾವಿಗೆ ಗಂಟೆಗೆ ರೂ.2600 ದರ ನಿಗಧಿ

» ದಾವಣಗೆರೆ

ಪ್ರಸಕ್ತ ಸಾಲಿನಲ್ಲಿ ಭತ್ತ ಕಟಾವು ಮಾಡಲು ಪ್ರತಿ ಗಂಟೆಗೆ ಯಂತ್ರಕ್ಕೆ ರೂ.2600 ಗಳ ಗರಿಷ್ಠ ದರ ನಿಗದಿ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ಆದೇಶಿಸಿದ್ದಾರೆ. ಭತ್ತ ಕಟಾವು ಯಂತ್ರದ ಮಾಲೀಕರು ಈ ದರ ಮೀರದಂತೆ ಭತ್ತ ಕಟಾವು ಕೈಗೊಳ್ಳಬೇಕು. ಖಾಸಗಿ ಭತ್ತ ಕಟಾವು ಯಂತ್ರಗಳ ಮಾಲೀಕರು ರೈತರಿಂದ ಹೆಚ್ಚಿನ ದರ ಪಡೆದರೆ ವಿಪತ್ತು ನಿರ್ವಹಣಾ ಕಾಯ್ದೆಯನ್ವಯ ಕಾನೂನು ಕ್ರಮ ಕೈಗೊಳ್ಳಲಾಗುವುದು. ಭತ್ತ ಕಟಾವು ಯಂತ್ರದ ಮಾಲೀಕರು ರೈತರಿಂದ ಹೆಚ್ಚಿನ ದರ ಪಡೆದಲ್ಲಿ ರೈತರು ಕಂದಾಯ ಅಥವಾ ಕೃಷಿ ಇಲಾಖೆಯ ಅಧಿಕಾರಿಗಳನ್ನು ಸಂಪರ್ಕಿಸಲು ತಿಳಿಸಿದ್ದಾರೆ.

### ಬಾರಿ ರಿಯಾಯಿತಿ

» ದಾವಣಗೆರೆ

ಕ್ರಿಸ್‌ಮಸ್ ಮತ್ತು ಹೊಸ ವರ್ಷದ ಪ್ರಯುಕ್ತ ಎ.ವಿ.ಕೆ ಕಾಲೇಜ್ ರಸ್ತೆಯಲ್ಲಿನ ಲಿಡಕರ್ ನಿಗಮದಿಂದ ಡಿಸೆಂಬರ್ 20 ರಿಂದ ಜನವರಿ 5 ರವರೆಗೆ ಚರ್ಮದ ಪಾದರಕ್ಷೆ, ಶೂ, ಬೆಲ್ಟ್, ಪರ್ಸ್, ಟ್ರಾವಲ್ ಬ್ಯಾಗ್, ಲ್ಯಾಪ್‌ಟಾಪ್ ಬ್ಯಾಗ್, ಮಹಿಳೆಯರ ಪರ್ಸ್, ವ್ಯಾನಟಿ ಬ್ಯಾಗ್‌ಗಳ ಮೇಲೆ ಶೇಕಡ 20 ರಿಂದ 40 ರಷ್ಟು ರಿಯಾಯತಿ ಇರುತ್ತದೆ ಎಂದು ಲಿಡಕರ್ ನಿಗಮದ ವ್ಯವಸ್ಥಾಪಕರು ತಿಳಿಸಿದ್ದಾರೆ.

ದೈನಂದಿನ ಜೀವನದಲ್ಲಿ ಗಣಿತದ ಅನ್ವಯಗಳನ್ನು ಮಕ್ಕಳಿಗೆ ಮನವರಿಕೆ ಮಾಡಿಸುವುದು ಅವಶ್ಯ; ಸಿಇಓ ಸುರೇಶ್ ಬಿ. ಇಟ್ನಾಳ್

# ದಾವಣಗೆರೆ ಜಿಲ್ಲಾ ಮಟ್ಟದ ಗಣಿತ ವಿಚಾರ ಸಂಕಿರಣ

» ದಾವಣಗೆರೆ

ನಮ್ಮ ದೈನಂದಿನ ಜೀವನದಲ್ಲಿ ಗಣಿತದ ಅನ್ವಯಗಳನ್ನುನಾವುಎಲ್ಲೆಡೆಕಾಣಬಹುದು ಎಂಬುದನ್ನು ಮಕ್ಕಳಿಗೆ ಮನವರಿಕೆ ಮಾಡಿಸುವುದು ಇಂದಿನ ಅವಶ್ಯವಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ. ಇಟ್ನಾಳ್ ತಿಳಿಸಿದರು.

ಅವರು ಶನಿವಾರ ಜಿಲ್ಲಾ ಮಟ್ಟದ ಗಣಿತ ವಿಚಾರ ಸಂಕಿರಣದ ಅಂಗವಾಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತರಾಜ್ ಇಲಾಖೆ, ಶಾಲಾ ಶಿಕ್ಷಣ ಇಲಾಖೆ ಮತ್ತು ಅಕ್ಷರ ಫೌಂಡೇಶನ್ ಸಂಯುಕ್ತಾಶ್ರಯದಲ್ಲಿ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಜಿಲ್ಲಾ ಮಟ್ಟದ ಗಣಿತ ವಿಚಾರ ಸಂಕಿರಣದ ಗ್ರಾಮ ಪಂಚಾಯತ್ ಗಣಿತ ಸ್ಪರ್ಧೆಗಳ ಜಿಲ್ಲಾ ವರದಿ ಬಿಡುಗಡೆ ಹಾಗೂ ಶಾಲಾ ಮತ್ತು ಗ್ರಾಮ ಪಂಚಾಯಿತಿಗಳ ಸನ್ಮಾನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. 29 ಇಲಾಖೆಗಳು ನಮ್ಮ ವ್ಯಾಪ್ತಿಗೆ ಬರುತ್ತವೆ, ಅವರುಗಳನ್ನೆಲ್ಲಾ ಒಗ್ಗೂಡಿಸಿಕೊಂಡು ಮಕ್ಕಳ ಕಲಿಕೆಯಲ್ಲಿ ಬದಲಾವಣೆ ತರುವುದು ಬಹಳ ಮುಖ್ಯವಾಗಿದೆ ಎಂದು ತಿಳಿಸಿದರು.

ಅಂಗನಾವಾಡಿ ಹಂತದಲ್ಲೆ ಮಕ್ಕಳ ಶಿಕ್ಷಣಕ್ಕೆ ಮಹತ್ವ ನೀಡಬೇಕು ಹಾಗೂ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಶಾಲೆಗೆ ಕರೆ ತಂದು ಅವರ ವಿದ್ಯಾಭ್ಯಾಸಕ್ಕೆ ಶಿಕ್ಷಕರು ಹೆಚ್ಚಿನ ಗಮನ ನೀಡಬೇಕು ಎಂದರು.




ಸಮುದಾಯಭಿವೃದ್ಧಿ ಹಾಗೂ ಅಕ್ಷರ ಫೌಂಡೇಶನ್ ಮುಖ್ಯಸ್ಥರಾದ ಶಂಕರ ನಾರಯಣ ಜೆ.ವಿ ಪ್ರಾಸ್ತಾವಿಕವಾಗಿ ಮಾತನಾಡಿ ಗಣಿತ ಕಲಿಕಾ ಆಂದೋಲನ ಯೋಜನೆಯು ಸುಮಾರು ವರ್ಷಗಳಿಂದ ಸರ್ಕಾರಿ ಪ್ರಾಥಮಿಕ ಶಾಲಾ ಮಕ್ಕಳ ಗುಣಾತ್ಮಕ ಕಲಿಕೆಗಾಗಿ ಹಾಗೂ ಮಕ್ಕಳು ಗಣಿತ ವಿಷಯವನ್ನು ಸರಳವಾಗಿ, ಅನುಭವಾತ್ಮಕವಾಗಿ ಕಲಿಯಲು ಜಿಲ್ಲೆಯ ಪ್ರತಿ ಶಾಲೆಗಳಿಗೆ ಗಣಿತ ಕಿಟ್ ನೀಡುವುದರ ಮೂಲಕ ಅನುಷ್ಠಾನಗೊಂಡಿರುತ್ತದೆ.

ಈ ಯೋಜನೆಯಡಿ ಬೀದರ ಜಿಲ್ಲೆಯ ಗ್ರಾಮಿಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಶಿಕ್ಷಣ ಇಲಾಖೆ, ಸಮುದಾಯ, ಶೈಕ್ಷಣಿಕ ಸ್ವಯಂ ಸೇವಕರು, ಗ್ರಾಮ ಪಂಚಾಯತ್ ಮಟ್ಟದ ಶೈಕ್ಷಣಿಕ ತಂಡದ ನಾಯಕರು ಹಾಗೂ ಅಕ್ಷರ ಫೌಂಡೇಶನ್ ಸಹಭಾಗಿತ್ವದಲ್ಲಿ ಗ್ರಾಮ ಪಂಚಾಯಿತಿ ಮಟ್ಟದ ಗಣಿತ ಸ್ಪರ್ಧೆಗಳನ್ನು 4ನೇ ತರಗತಿಯಿಂದ 6ನೇ ತರಗತಿಯ ಮಕ್ಕಳಿಗೆ ಒಟ್ಟು 194 ಗ್ರಾಮ ಪಂಚಾಯತಿಗಳಲ್ಲಿ ಮಾಡಲಾಗಿದ್ದು. ಸುಮಾರು 20000 ಮಕ್ಕಳು ಭಾಗವಹಿಸಿ ಇದರ ಸದುಪಯೋಗ ಪಡೆದುಕೊಂಡಿರುತ್ತಾರೆ ಎಂದು ತಿಳಿಸಿದರು.

ಗ್ರಾಮ ಪಂಚಾಯತಿ ಮಟ್ಟದ ಗಣಿತ ಸ್ಪರ್ಧೆಗಳು ಎಲ್ಲರ ಸಹಕಾರದೊಂದಿಗೆ ಉತ್ತಮ ರೀತಿಯಲ್ಲಿ ಯಶಸ್ಸನ್ನು ಸಾಧಿಸಿದೆ. ಹಾಗೂ ಅಕ್ಷರ ಫೌಂಡೇಶನ್ ಸಂಸ್ಥೆಯು ಶಿಕ್ಷಣ ಕ್ಷೇತ್ರದಲ್ಲಿ ಇಲಾಖೆಯ ಸಹಕಾರದೊಂದಿಗೆ ಸಕ್ರಿಯವಾಗಿ ತೊಡಗಿಸಿಕೊಂಡು 2024-25ನೇ ವರ್ಷಕ್ಕೆ 25 ವರ್ಷಗಳು ಪೂರೈಸಲಿದೆ ಎಂದು ಹೇಳಿದರು.

ಗ್ರಾಮ ಪಂಚಾಯತಿ ಮಟ್ಟದ ಗಣಿತ ಸ್ಪರ್ಧೆಯ ಜಿಲ್ಲಾ ವರದಿಯನ್ನು ಬಿಡುಗಡೆ ಮಾಡುವುದರ ಮೂಲಕ ಅದರ ಫಲಿತಾಂಶದ ಕುರಿತು ಚರ್ಚಿಸಲಾಯಿತು.

2024-25 ನೇ ಸಾಲಿನಲ್ಲಿ ಗ್ರಾಮ ಪಂಚಾಯತಿ ಮಟ್ಟದ ಗಣಿತ ಸ್ಪರ್ಧೆಗಳು ಎಲ್ಲರ ಸಹಕಾರದೊಂದಿಗೆ ಅತ್ಯುತ್ತಮ ರೀತಿಯಲ್ಲಿ ಯಶಸ್ಸನ್ನು ಸಾಧಿಸಿದ ಜಿಲ್ಲೆಯ 25 ಗ್ರಾಮಗಳಾದ ಹಿಂಡಸಘಟ್ಟ, ನಾಗನೂರು, ಕಂಚಿಗನಹಾಲ್, ವಸಾನ, ಕಂಚುಗಾರನಹಳ್ಳಿ, ಕೋಟೆಹಾಲ್, ಮರಬನಹಳ್ಳಿ, ಕೊಕ್ಕನೂರು, ತ್ಯಾವಣಿಗೆ ,ಗುಡ್ಡದ ಬೆನಕನಹಳ್ಳಿ, ದಾಗಿನಕಟ್ಟೆ, ಚಂದ್ರನಹಳ್ಳಿ, ಎನ್.ಕೆ. ಬಡವಾಣೆ, ಎಸ್.ಜಿ.ಹಳ್ಳಿ, ಚಿರಡೋಣಿ, ಹೊಸ ಬೆಳವನೂರು, ಮಲ್ಲಿಗೇನಹಳ್ಳಿ , ಮಿಯಾಪುರ, ನೀತಿಗೆರೆ ,ಕಂಸಾಗಾರ ಹುಚ್ಚಂಗಿಪುರ, ತಣಿಗೆರೆ, ತರಲಬಾಳು ನಗರ, ತುರ್ಚಗಟ್ಟ, ಯಾಲೋದಹಳ್ಳಿ ಸರ್ಕಾರಿ ಕಿರಿಯ-ಹಿರಿಯ ಶಾಲಾ ಶಿಕ್ಷಣ ಇಲಾಖೆಗೆ ಹಾಗೂ 25 ಗ್ರಾಮ ಪಂಚಾಯತಿಗಳಾದ ವಸನಾ, ನಿಲೋಗಲ್ಲು, ಶಿರಮಗೊಂಡನಹಳ್ಳಿ, ತ್ಯಾವಣಿಗೆ, ಕೊಕ್ಕನೂರು, ದಾಗಿನಕಟ್ಟೆ ,ಬೆಳವನೂರು, ಲೋಕಿಕೆರೆ, ಕುಕ್ಕುವಾಡ, ಹಳೇಭಟ್ಟಿ, ದಿದ್ದಿಗಿ, ದೊಡ್ಡಬಾತಿ, ಜಿಗಳಿ, ಬಸವನಕೋಟೆ, ಸಂತೆಬೆನ್ನೂರು, ಹೆಬ್ಬಾಳು, ಅರಬಗಟ್ಟೆ, ಆನಗೋಡು, ಎಲೆಬೇತೂರ್, ಹನಗವಾಡಿ, ನಲ್ಲೂರು, ನೇರ್ಲಿಗೆ ಮತ್ತಿ , ಬನ್ನಿಕೋಡು ಗ್ರಾಮ ಪಂಚಾಯತಿ ಇಲಾಖೆಗಳಿಗೆ ಅಭಿನಂದನೆ ಸಲ್ಲಿಸಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಉಪ ಕಾರ್ಯದರ್ಶಿ ಎಲ್.ಎ ಕೃಷ್ಣನಾಯ್ಕ, ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಕೊಟ್ರೇಶ ಜಿ, ಗೀತಾ ಎಸ್. , ತಾಲೂಕ್ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ರಾಮ ಬೋವಿ , , ಬೆಳವನೂರು ಗ್ರಾಮ ಪಂಚಾಯತ ಸದಸ್ಯ ಜೆ.ಎಚ್ ಮಾಂತೇಶ, ಅಕ್ಷರ ಫೌಂಡೇಶನ್ ವಿಭಾಗೀಯ ವ್ಯವಸ್ಥಾಪಕರಾದ ಅಂಜಲಿನಾ ಗ್ರೇಗರಿ ಹಾಗೂ ಶಾಲೆಯ ಮುಖ್ಯ ಶಿಕ್ಷಕರು, ಗ್ರಾಮ ಪಂಚಾಯತ್ ಅಧ್ಯಕ್ಷರು, ಪಿ.ಡಿ.ಓ., ಇಓ, ಬಿಇಓ, ಬಿಆರ್‌ಸಿ, ಅಧಿಕಾರಿಗಳು ಭಾವಹಿಸಿದ್ದರು.

# ಕ್ರೀಡೆ ಮಾನವನ ಬೆಳವಣಿಗೆಗೆ ಸಹಕಾರಿ

» ಚಿತ್ರದುರ್ಗ

ಇಂದಿನ ದಿನಮಾನದಲ್ಲಿ ಮಕ್ಕಳು ಮೊಬೈಲ್, ಟಿ.ವಿಗೆ ಒಳಪಟ್ಟು ಆಟವಾಡುವುದನ್ನು ಮರೆತ್ತಿದ್ದಾರೆ,ನಮ್ಮಕಾಲದಲ್ಲಿಅಟದಮೈದಾನಗಳು ಬೆಳಿಗ್ಗೆ ಮತ್ತು ಸಂಜೆ ತುಂಬಿರುತ್ತಿದ್ದವು ಆದರೆ ಇಂದು ಖಾಲಿಯಾಗಿವೆ ಎಂದು ಸಾರ್ವಜನಿಕ ಶಿಕ್ಷಣ ಇಲಾಖೆಯ ದೈಹಿಕ ನಿರ್ದೇಶಕರಾದ ಚಿದಾನಂದಸ್ವಾಮಿ ವಿಷಾಧಿಸಿದರು.

ಚಿತ್ರದುರ್ಗ ನಗರದ ಪಾರ್ಶ್ವನಾಥ ವಿದ್ಯಾ ಸಂಸ್ಥೆಯವತಯಿಂದ ಒನಕೆ ಓಬವ್ವ ಕ್ರೀಡಾಂಗಣದಲ್ಲಿ ಶನಿವಾರ ನಡೆದ ಕ್ರೀಡಾ ಹಬ್ಬವನ್ನು ಉದ್ಘಾಟಿಸಿ ಮಾತನಾಡಿದ ಅವರು, ಕ್ರೀಡೆ ಮಾನವನ ಸರ್ವತೋಮುಖ ಬೆಳವಣಿಗೆಎ ಸಹಕಾರಿಯಾಗಿದೆ, ಕ್ರೀಡೆಯಲ್ಲಿ ಸಕ್ರಿಯವಾಗಿ ಭಾಗವಹಿಸುವುದರಿಂದ ದೇಹ ಮತ್ತು ಮನಸ್ಸು ಪ್ರತಿ ದಿನ ಉಲ್ಲಾಸವಾಗಿರುತ್ತದೆ. ಚಿಕ್ಕ ವಯಸ್ಸಿನಿಂದಲೇ ಯಾವುದಾದರೊಂದು ಕ್ರೀಡೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಳ್ಳುವುದರ ಮೂಲಕ ಮುಂದಿನ ನಿಮ್ಮ ಜೀವನವನ್ನು ಉತ್ತಮಪಡಿಸಿಕೊಳ್ಳಬೇಕಿದೆ ಎಂದು ಕರೆ ನೀಡಿದರು.

ಕ್ರೀಡೆಯಲ್ಲಿ ಸಕ್ರಿಯವಾಗಿ ಭಾಗವಹಿಸುವುದರಿಂದ ಜೀವನದಲ್ಲಿ ಶ್ರದ್ದೆ, ಶಿಸ್ತು ಅಳವಡಿಕೆಯಾಗುತ್ತದೆ. ಪಠ್ಯದ ಜೊತೆಗೆ ಕ್ರೀಡೆಯನ್ನು ಸಹಾ ಆಳವಡಿಸಿಕೊಳ್ಳುವುದರಿಂದ ನಿಮ್ಮ ಬದುಕಿನಲ್ಲಿ ಉತ್ತಮವಾದ ಸಾಧನೆಯನ್ನು ಮುಂದಿನ ದಿನಮಾನದಲ್ಲಿ ಮಾಡಬಹುದಾಗಿದೆ. ಇಂದಿನ ದಿನಮಾನದಲ್ಲಿ ಮಕ್ಕಳ ಕೈಯಲ್ಲಿ ಪೋಷಕರು ಮೊಬೈಲ್ ನೀಡುವುದರಿಂದ ಮಕ್ಕಳು ಮೈದಾನದಲ್ಲಿ ಬಂದು ಆಡುವ ಪದ್ದತಿ ಕಡಿಮೆಯಾಗುತ್ತಿದೆ, ಇದ್ದಲ್ಲದೆ ಮನೆಯಲ್ಲಿ ಪೋಷಕರು ಟಿ.ವಿ.ಯನ್ನು ನೋಡುವುದರಿಂದ ಅದನ್ನು ಮಕ್ಕಳು ಸಹಾ ನೋಡುತ್ತಾರೆ ಹೊರಗಡೆ ಬರುವುದಿಲ್ಲ, ನಮ್ಮ ಆರೋಗ್ಯದ ಕಡೆ ಗಮನವನ್ನು ನೀಡಬೇಕಿದೆ ನಮಗೆ ವಯಸ್ಸಾದರು ಸಹಾ ನಮ್ಮ ಆರೋಗ್ಯ ಚನ್ನಾಗಿ ಇರಬೇಕಾದರೆ ಚಿಕ್ಕ ವಯಸ್ಸಿನಿಂದಲೇ ಕ್ರೀಡೆಯಲ್ಲಿ ತೊಡಗಿಸಿಕೊಳ್ಳಬೇಕಿದೆ ಎಂದು ಚಿದಾನಂದಸ್ವಾಮಿ ಕರೆ ನೀಡಿದರು.



ನಿವೃತ್ತ ದೈಹಿಕ ನಿರ್ದೇಶಕರಾದ ಜಯ್ಯಣ್ಣ ಮಾತನಾಡಿ, ಕ್ರೀಡೆಯಲ್ಲಿ ತೊಡಗಿರುವುದರಿಂದ ನಮ್ಮ ಆರೋಗ್ಯ ಚನ್ನಾಗಿ ಇರುತ್ತದೆ ಸಣ್ಣ-ಪುಟ್ಟ ಖಾಯಿಲೆಗಳಿಂದ ದೂರ ಇರಬಹುದಾಗಿದೆ. ಕ್ರೀಡೆಯಲ್ಲಿ ಭಾಗವಹಿಸುವುದರಿಂದ ಮನಸ್ಸು ಹಗುರವಾಗುತ್ತದೆ. ಈ ಶಾಲೆಯಲ್ಲಿ ಶಿಕ್ಷಕರು ಚನ್ನಾಗಿ ಇದ್ದಾರೆ ಉತ್ತಮವಾದ ಭೋಧನೆಯ ಜೊತೆಗೆ ಮಕ್ಕಳಲ್ಲಿ ಉತ್ತಮವಾದ ಕ್ರೀಡೆಯಲ್ಲಿ ಆಸಕ್ತಿಯನ್ನು ಮೂಡಿಸುವಮತ ಕಾರ್ಯವನ್ನು ಮಾಡುತ್ತಿದ್ದಾರೆ, ಮಕ್ಕಳ ಪ್ರಗತಿಯಲ್ಲಿ ಪೋಷಕರ ಪಾತ್ರ ಎಷ್ಟು ಮುಖ್ಯವೂ ಅಷ್ಟೇ ಪ್ರಮಾಣದಲ್ಲಿ ಶಿಕ್ಷಕರ ಪಾತ್ರವೂ ಸಹಾ ಮುಖ್ಯವಾಗಿದೆ ಎಂದರು.ಪಾರ್ಶ್ವನಾಥ್ ವಿದ್ಯಾ ಸಂಸ್ಥೆಯ ಅಧ್ಯಕ್ಷರಾದ ಬಾಬುಲಾಲ್ ಜೀ ಮಾತನಾಡಿ ನಮ್ಮ ಶಾಲೆ ಪಠ್ಯದಷ್ಟೇ ಮಹತ್ವನ್ನು ಕ್ರೀಡೆಗೂ ಸಹಾ ನೀಡುತ್ತಿದೆ ಪ್ರತಿ ವರ್ಷವೂ ಸಹಾ ಈ ರೀತಿಯಾದ ಕ್ರೀಡಾಕೂಟವನ್ನು ನಡೆಸುವುದರ ಮೂಲಕ ಮಕ್ಕಳಲ್ಲಿನ ಕ್ರೀಡಾ ಪ್ರತಿಭೆಯನ್ನು ಹೊರ ತೆಗೆಯವ ಕಾರ್ಯವನ್ನು ಮಾಡಲಾಗುತ್ತದೆ. ಇಂದಿನ ಮಕ್ಕಳೇ ನಾಡಿನ ಸಂಪತ್ತು ದೇಶಕ್ಕೆ ಉತ್ತಮವಾದ ಆರೋಗ್ಯವಂತರಾಧ ಮಕ್ಕಳನ್ನು ಕೊಡುಗೆಯಾಗಿ ನೀಡುವುದು ನಮ್ಮ ಉದ್ದೇಶವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಪಾರ್ಶ್ವನಾಥ್ ವಿದ್ಯಾ ಸಂಸ್ಥೆಯ ಉಪಾಧ್ಯಕ್ಷರಾದ ಉತ್ತಮ ಚಂದ್, ಕಾರ್ಯದರ್ಶಿ ಸುರೇಶ್ ಕುಮಾರ್, ಖಜಾಂಚಿ ರಾಜೇಂದ್ರ ಕುಮಾರ್, ನಿರ್ದೇಶಕರಾದ ಸುರೇಶ್ ಪಟ್ಟಿಯಾರ್, ಮುಕೇಶ್ ಕುಮಾರ್,ಮ ಮುಖ್ಯ ಶಿಕ್ಷಕರಾದ ನಾಜಿಮ್, ವಿಜಯಲಕ್ಮೀ, ಶಾಂತಕುಮಾರಿ ಭಾಗವಹಿಸಿದ್ದರು.

ಚೈತ್ರಾ ಪ್ರಾರ್ಥಿಸಿದರೆ, ಆಶ್ವಿನಿ ಕ್ರೀಡಾ ವಾರ್ಷಿಕ ವರದಿಯನ್ನು ವಾಚನ ಮಾಡಿದರೆ, ಸಂಗೀತ ಕ್ರೀಡಾ ಪಟುಗಳಿಗೆ ಕ್ರೀಡಾ ಪ್ರತಿಜ್ಞೆಯನ್ನು ಭೋಧಿಸಿದರು.

## ಶಾಲಾ ಮಕ್ಕಳಿಂದ ಮಕ್ಕಳ ಸಂತೆ: ನಸೀಂ ಉನ್ನೀಸ



» ಚಳ್ಳಕೆರೆ

ನಗರದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಆವರಣದಲ್ಲಿರುವ ಸರ್ಕಾರಿ ಉರ್ದು ಹಿರಿಯ ಪ್ರಾಥಮಿಕ ಶಾಲಾ ಮಕ್ಕಳು ಶನಿವಾರ ಮಕ್ಕಳ ಸಂತೆ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ಶಾಲೆಯ ಮುಖ್ಯೋಪಾಧ್ಯಾಯಿನಿ ನಸೀಂಉನ್ನೀಸ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಮಕ್ಕಳು ಶಾಲೆಯಲ್ಲಿ ವಿವಿಧ ವಿಷಯಗಳ ಬಗ್ಗೆ ಅಭ್ಯಾಸ ನಡೆಸುತ್ತಾರೆ. ಆದರೆ, ಅವರಿಗೆ ಮಾರುಕಟ್ಟೆ ವ್ಯವಹಾರಗಳ ಬಗ್ಗೆ ತಿಳಿದುಕೊಳ್ಳುವ ಅವಶ್ಯಕತೆ ಇದೆ. ಆದ್ದರಿಂದ ಶಾಲಾ ಹಂತದಲ್ಲೇ ಈ ಕಾರ್ಯಕ್ರಮವನ್ನು ವಿದ್ಯಾರ್ಥಿಗಳು, ಪೋಷಕರು ಹಾಗೂ ಶಿಕ್ಷಕರ ಸಹಾಯದಿಂದ ಹಮ್ಮಿಕೊಳ್ಳಲಾಗಿದೆ ಎಂದರು. ಸಹ ಶಿಕ್ಷಕ ಎಚ್. ಎನ್.ಶ್ರೀಧರ್ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಪಠ್ಯಪುಸ್ತಕದ ಜ್ಞಾನದ ಜೊತೆಗೆ ವ್ಯವಹಾರಿಕ ಜ್ಞಾನವೂ ಸಹ ಬೆಳೆಸಬೇಕಿದೆ. ಈ ನಿಟ್ಟಿನಲ್ಲಿ ಶಿಕ್ಷಣ ಇಲಾಖೆಯ ಮಾರ್ಗಸೂಚಿಯಂತೆ ಈ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಹೆಚ್ಚಿನ ಉತ್ತೇಜನ ಸಿಕ್ಕಿದೆ, ವಿದ್ಯಾರ್ಥಿಗಳು ಸಹ ಸಂತಸದಿಂದ ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡರು.

## ಉಸ್ತುವಾರಿ ಸಮಿತಿ ಸಭೆ

» ದಾವಣಗೆರೆ

ಜಿಲ್ಲಾಧಿಕಾರಿ ಅಧ್ಯಕ್ಷತೆಯಲ್ಲಿ ಡಿ.24 ರಂದು ಬೆಳಿಗ್ಗೆ 10.30ಕ್ಕೆ ಟ್ರಾನ್ಸ್‌ಜೆಂಡರ್‌ರವರಿಗೆ ಸೌಲಭ್ಯಗಳನ್ನು ಒದಗಿಸುವ ಸಂಬಂಧ ಮತ್ತು ದಮನಿತ ಮಹಿಳೆಯರ (ಸಂರಕ್ಷಣಾ, ಪುನಶ್ಚೇತನಾ ಮತ್ತು ದಮನತಡೆ) ಜಿಲ್ಲಾ ಮಟ್ಟದ ಸಮನ್ವಯ ಮತ್ತು ಉಸ್ತುವಾರಿ ಸಮಿತಿ, ಕೋಶದ ಸಭೆಯನ್ನು ಆಯೋಜಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ರಾಜಾ ನಾಯ್ಕ ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

# ನಗರದಲ್ಲಿ ನಾಯಿಗಳ ಹೆಚ್ಚಳ: ನಿಯಂತ್ರಣಕ್ಕೆ ಜನರ ಮನವಿ

» ಚಳ್ಳಕೆರೆ

ನಗರದ ಪ್ರತಿಯೊಂದು ವಾರ್ಡ್‌ಗಳ ವ್ಯಾಪ್ತಿಯಲ್ಲಿ ದಿನದಿಂದ ದಿನಕ್ಕೆ ನಾಯಿಗಳ ಹಾವಳಿ ಹೆಚ್ಚುತ್ತಲೇ ಇದೆ. ಮಕ್ಕಳು, ವೃದ್ದರು, ಮಹಿಳೆಯರು ಒಬ್ಬಂಟಿಯಾಗಿ ಓಡಾಡುವುದೇ ಕಷ್ಟವಾಗಿದೆ.

ಹತ್ತಾರು ನಾಯಿಗಳ ಹಿಂಡು, ಹಿಂಡಾಗಿ ಬೀದಿಗಳಲ್ಲಿ ಬೀಡುಬಿಟ್ಟಿರುತ್ತವೆ. ನಗರದ ಸರ್ಕಾರಿ ಮತ್ತು ಖಾಸಗಿ ಬಸ್ಟಾಂಡ್, ರಹೀಂನಗರ, ಶಾಂತಿನಗರ, ಗಾಂಧಿನಗರ, ವಿಠಲನಗರ, ಮದಕರಿನಗರವೂ ಸೇರಿದಂತೆ ಹಲವಾರು ಕಡೆಗಳಲ್ಲಿ ಓಡಾಡುವ ಜನರ ಮೇಲೆ ಎರಗುತ್ತಿವೆ. ಒಬ್ಬಂಟಿಯಾಗಿ ಓಡಾಡುವ ಮಕ್ಕಳನ್ನೇ ಗುರಿಯಾಗಿಸುವ ಹಿಂಡು, ಹಿಂಡು ನಾಯಿಗಳು ಭಯಭೀತರನ್ನಾಗಿಸುತ್ತಿವೆ. ಸೈಕಲ್, ಬೈಕ್ ಸವಾರರು ಸಂಚರಿಸುವ ವೇಳೆ ಹಿಂಬಾಲಿಸಿಕೊಂಡು ಓಡುತ್ತವೆ, ಶಾಲಾ ಬ್ಯಾಗ್ ಹಾಕಿಕೊಂಡು ಓಡಾಡುವ ಮಕ್ಕಳ ಮೇಲೆ ದಾಳಿ ಮಾಡಲು ಮುಂದಾಗುತ್ತಿವೆ.

ನಗರದ ವ್ಯಾಪ್ತಿಯ ರಹೀಂನಗರ, ಶಾಂತಿನಗರ, ಗಾಂಧಿನಗರಗಳ ಮಾಂಸದ ಅಂಗಡಿಗಳ ಮುಂದೆ ಗುಂಪು, ಗುಂಪಾಗಿ ನಾಯಿಗಳು ಓಡಾಡುತ್ತಿವೆ. ಸ್ವಲ್ಪ ಯಾಮಾರಿದರೂ ನಾಯಿದಾಳಿಗೆ ಒಳಗಾಬೇಕಾಗುತ್ತದೆ. ಎಲ್ಲಂದರಲ್ಲಿ ತಲೆಎತ್ತಿರುವ ಮಾಂಸದ ಅಂಗಡಿ ಮುಂದೆ ಬೀಡುಬಿಟ್ಟ ಬೀದಿನಾಯಿಗಳು ಒಮ್ಮೆ ಕಚ್ಚಾಡುತ್ತಾ ಮನುಷ್ಯರ ಮೇಲೆಯೇ ಬರುತ್ತಿವೆ.ನಗರಸಭೆ ಅಧಿಕಾರಿಗಳು ಹಲವಾರು ಕಾನೂನು ಕಟ್ಟುಪಾಡುಗಳ ನಡುವೆ ಬೀದಿನಾಯಿಗಳ ನಿಯಂತ್ರಣ ಮಾಡಲಾಗು ಸಾಧ್ಯವಾಗದೆ ಕೈಚಲ್ಲಿ ಕುಳಿತ ಕಾರಣ ನಾಯಿಗಳ ಸಂಖ್ಯೆಯೂ ದಿನದಿಂದ ದಿನಕ್ಕೆ ಹೆಚ್ಚಳವಾಗುತ್ತಿದೆ. ನಾಯಿಗಳ ನಿಯಂತ್ರಣ ಬಗ್ಗೆ ನಿಗದಿತ ವ್ಯವಸ್ಥೆ ಇಲ್ಲದೆ ಇರುವುದು ನಾಯಿಗಳ ಹೆಚ್ಚಳಕ್ಕೆ ಕಾರಣವೂ ಆಗಿದೆ ಎನ್ನುತ್ತಾರೆ ಸಾರ್ವಜನಿಕರು. ನಾಯಿಗಳ ನಿಯಂತ್ರಣಕ್ಕೆ ನಗರಸಭೆಯ ಸಾಮಾನ್ಯ ಸಭೆಯಲ್ಲಿ ಹಲವಾರು ಸದಸ್ಯರು ಧ್ವನಿ ಎತ್ತಿ ನಿಯಂತ್ರಣ ಮಾಡಲು ಒತ್ತಡ ಹಾಕಿದ್ದರೂ ನಾಯಿಗಳ ನಿಯಂತ್ರಣ ಮಾತ್ರ ಸಾಧ್ಯವಾಗಿಲ್ಲ.



> ನಗರ ವ್ಯಾಪ್ತಿಯಲ್ಲಿ ನಾಯಿಗಳ ಉಪಟಳ ಹೆಚ್ಚಾಗಿದೆ. ವೃದ್ದರು, ಮಕ್ಕಳು ಹೊರಗಡೆ ಹೋಗಲು ಹೆದರುವ ಪರಿಸ್ಥಿತಿ ನಗರದಲ್ಲಿ ನಿರ್ಮಾಣವಾಗಿದೆ. ಸುಮಾರು ಜನರು ನಾಯಿದಾಳಿಯಿಂದ ಭಯಭೀತರಾಗಿದ್ಧಾರೆ. ನಿಯಂತ್ರಣಕ್ಕೆ ನಗರಸಭೆ ಮುಂದಾಗಬೇಕು.
>
> » **ನೇತಾಜಿ ಪ್ರಸನ್ನ, ನೇತಾಜಿ ಸ್ನೇಹ ಬಳಗ ಅಧ್ಯಕ್ಷ**

> ಕಾನೂನು ಪ್ರಕಾರ ಬೀದಿನಾಯಿಗಳನ್ನು ಕೊಲ್ಲುವಂತಿಲ್ಲ, ಅವುಗಳಿಗೆ ಸಂತಾನಹರಣ ಚಿಕಿತ್ಸೆ ಕೊಡಿಸಿ ಮತ್ತೆ ಅವುಗಳ ವಾಸ್ತಸ್ಥಾನಕ್ಕೆ ತಂದುಬಿಡಬೇಕಿದೆ. ನಾಯಿಗಳ ನಿಯಂತ್ರಣ ಮಾಡಲು ಸಾಕಷ್ಟು ಪರಿಶ್ರಮ ವಹಿಸುತ್ತಿದ್ದೇವೆ.
>
> » **ನರೇಂದ್ರಬಾಬು, ಇಂಜಿನಿಯರ್ ನಗರಸಭೆ.**

ಹಗಲಿನಲ್ಲಿ ಸಾಧುವಂತೆ ವರ್ತಿಸುವ ನಾಯಿಗಳು ರಾತ್ರಿ ವೇಳೆಗೆಮೃಗಗಳಾಗಿ ಪರಿಣಮಿಸುತ್ತವೆ. ಕಸದ ರಾಶಿ, ಮಾಂಸದ ಅಂಗಡಿಗಳೇ ಇವುಗಳ ಅಡ್ಡೆಯಾಗಿದೆ. ಆಹಾರ, ಮಾಂಸವನ್ನು ತಿನ್ನಲು ನಾಯಿಗಳು ಗುಂಪುಗಳ ನಡುವೆ ಕಾದಾಟ ನಡೆಯುತ್ತಲೇ ಇರುತ್ತದೆ. ಈ ಸಂದರ್ಭದಲ್ಲಿ ಸಿಕ್ಕ, ಸಿಕ್ಕ ಜನರ ಮೇಲೂ ಹೋಗುತ್ತಿವೆ.

ಹಲವಾರು ಕಾನೂನು ತೊಡಕುಗಳ ನಡುವೆ ನಾಯಿಗಳನ್ನು ನಿಯಂತ್ರಿಸಬೇಕಿದೆ. ಸಂತಾನಹರಣ ಚಿಕಿತ್ಸೆ ಒಂದೇ ದಾರಿಯಾದ ಕಾರಣ ಅಧಿಕಾರಿಗಳು ಏನುಮಾಡದ ಸ್ಥಿತಿಗೆ ತಲುಪಿದ್ದಾರೆ. ಕೆಲ ಪ್ರಾಣಿ ಪ್ರಿಯರು ಬೀದಿನಾಯಿಗಳಿಗೆ ತಿಂಡಿ, ತಿನಿಸು, ಮಾಂಸ ಆಹಾರ ಹಾಕುವ ಮೂಲಕ ದಿನೇ ದಿನೆ ತಮ್ಮ ಸಂತತಿಯನ್ನು ಹೆಚ್ಚಿಸಿಕೊಳ್ಳುತ್ತಿವೆ. ಅದರಲ್ಲೇ ಮಕ್ಕಳು, ಮಹಿಳೆಯರು ಕೈಯಲ್ಲಿ ಏನಾದರೂ ಹಿಡಿದುಕೊಂಡು ಹೋದರೆ ಅದನ್ನು ಕಸಿದುಕೊಳ್ಳಲು ಮೇಲೆರಗುತ್ತಿವೆ ಎಂದು ಅಧಿಕಾರಿಗಳು ಸಮಜಾಯಿಸಿ ನೀಡುತ್ತಾರೆ.




# ಹೆಣ್ಣಿನ ಮೇಲಿನ ಲೈಂಗಿಕ ದೌರ್ಜನ್ಯ



ಕಾಸ್ಟ್ ಕೌಚಿಂಗ್ ಅಥವಾ ಮೀಟೂ ಅಥವಾ ಹೆಣ್ಣು ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ಅಥವಾ ಮಹಿಳಾ ಶೋಷಣೆ ಅಥವಾ ಹೆಣ್ತನದ ದುರುಪಯೋಗ ಅಥವಾ ಇನ್ನೂ ಏನೇನೋ ಹೆಸರುಗಳಿಂದ ಕರೆಯಬಹುದಾದ ವಿವಾದ ಮತ್ತೆ ಭುಗಿಲೆದ್ದಿದೆ......


ಹಲವಾರು ವರ್ಷಗಳಿಂದ ಕೇಳಿ ಬ ರುತ್ತಿರುವ ಈ ಸುದ್ದಿಗಳು ಆಗಾಗ ಬಹಿರಂಗವಾಗಿ ಸ್ಪೋಟಗೊಳ್ಳುತ್ತವೆ. ಇದೀಗ ಮಲಯಾಳಂ ಚಿತ್ರರಂಗದಲ್ಲಿ ಸುದ್ದಿಯಾದ ಈ ವಿಷಯ ಈಗ ಕನ್ನಡ ಚಿತ್ರರಂಗದಲ್ಲೂ ಚರ್ಚೆ ಹುಟ್ಟು ಹಾಕಿದೆ......

ಮೂಲಭೂತವಾಗಿ ಈ ಸಮಸ್ಯೆಯನ್ನು ಚಿತ್ರರಂಗಕ್ಕೆ ಮಾತ್ರ ಸೀಮಿತವಾಗಿ ಚರ್ಚಿಸುವುದೇ ಹಾಸ್ಯಾಸ್ಪದ. ಇದು ಇಡೀ ದೇಶದ ಎಲ್ಲಾ ಕ್ಷೇತ್ರಗಳಲ್ಲೂ ಅಂದರೆ ಒಟ್ಟಾರೆಯಾಗಿ ಈ ಸಮಾಜದಲ್ಲಿ ಅಂತರ್ಗತವಾಗಿ ನಡೆಯುತ್ತಿರುವ ಪ್ರತಿಕ್ಷಣದ ಕ್ರಿಯೆ ಪ್ರಕ್ರಿಯೆ ಪ್ರತಿಕ್ರಿಯೆಗಳು.....

ಹೆಣ್ಣನ್ನು ಅವಕಾಶ ಆಧರಿಸಿ ಎಷ್ಟು ಸಾಧ್ಯವೋ ಅಷ್ಟು ಶೋಷಣೆಗೆ ಒಳಪಡಿಸಲು ಕೆಲವು ಸಾಮಾನ್ಯರು, ಕೆಲವು ದುಷ್ಟ ಶಕ್ತಿಗಳು, ಕೆಲವು ವಿಕೃತ ಮನಸ್ಸಿನವರು ಸದಾ ಪ್ರಯತ್ನಿಸುತ್ತಲೇ ಇರುತ್ತಾರೆ. ಇದು ನಿರಂತರವಾಗಿ ನಡೆದುಕೊಂಡು ಬರುತ್ತಿದೆ.....

ಈ ವಿಷಯದ ಆಳ ಅಗಲಗಳನ್ನು ಚರ್ಚಿಸುವ ಮೊದಲು ಮತ್ತೊಂದು ಒಳ್ಳೆಯ ಆಯಾಮವೂ ನಮ್ಮ ಗಮನದಲ್ಲಿರಬೇಕು. ಅಂದರೆ ನನ್ನ ಅನುಭವದ ಆಧಾರದ ಮೇಲೆ ಹೇಳುವುದಾದರೆ ಈ ಸಮಾಜದ ಶೇಕಡ 50ಕ್ಕೂ ಹೆಚ್ಚು ಪುರುಷರು ಯಾವ ಕಾರಣಕ್ಕೂ ಮಹಿಳೆಯನ್ನು ಭೋಗದ ವಸ್ತು, ಕಾಮದ ವಸ್ತು ಶೋಷಣೆಗೆ ಒಳಪಡಿಸಬಹುದಾದ ಜೀವ ಎನ್ನುವ ಯಾವ ತಪ್ಪುಕಲ್ಪನೆಯನ್ನು ಇಟ್ಟುಕೊಳ್ಳದೆ ಅಕ್ಕ ತಂಗಿ ಗೆಳತಿ ಹೆಂಡತಿ ಪ್ರೇಯಸಿ ತಾಯಿ ಅತ್ತಿಗೆ ಸೊಸೆ ಮುಂತಾದ ಸಂಬಂಧಗಳನ್ನು ನಿರ್ದಿಷ್ಟವಾಗಿ, ಅದಕ್ಕೆ ತಕ್ಕಂತೆ ಅತ್ಯಂತ ಗೌರವದಿಂದ, ಮಾನವೀಯತೆಯಿಂದ ನಡೆಸಿಕೊಳ್ಳುತ್ತಾರೆ....

ಉಳಿದ ಸುಮಾರು ಮೂವತ್ತರ ಶೇಕಡ 30ರಷ್ಟು ಗಂಡಸರು ಎಲ್ಲೋ, ಯಾವಾಗಲೂ ಯಾವುದೇ



ತೊಂದರೆ ಇಲ್ಲ ಎಂಬ ಭರವಸೆ ಮೂಡಿದರೆ, ಅವಕಾಶ ದೊರೆತರೆ, ಸಹಾಯದ ನೆಪದಲ್ಲೋ, ಆಮಿಷದ ನೆಪದಲ್ಲೋ, ಹಣಕಾಸಿನ ಆಸೆ ಒಡ್ಡಿಯೋ, ಕಪಟ ಮುಖವಾಡದ ಭಾವದಿಂದಲೋ ಒಪ್ಪಿತ ಅನೈತಿಕ ಸಂಬಂಧವನ್ನು ಹೊಂದುತ್ತಾರೆ.....

ಇನ್ನುಳಿದ ಶೇಕಡಾ 15ರಷ್ಟು ಜನ ಹೆಣ್ಣನ್ನು ಭೋಗದ ವಸ್ತುವೆಂದು ತಿಳಿದು ಯಾವ ದುಷ್ಟ ಮಾರ್ಗದಿಂದಲಾದರೂ ಹೆಣ್ಣಿನ ಸಂಪರ್ಕಕ್ಕೆ ಹಾತೊರೆಯುವ, ಅದಕ್ಕಾಗಿ ಕ್ರಿಮಿನಲ್ ಕೃತ್ಯಗಳಲ್ಲಿ ಭಾಗಿಯಾಗುವ ಮನಸ್ಥಿತಿ ಹೊಂದಿರುತ್ತಾರೆ. ಇವರೇ ನಿಜವಾದ ಹೆಣ್ಣಿನ ಶೋಷಣೆಯ ಮಹಾನ್ ಕಿರಾತಕರು. ಇದನ್ನು ಹೊರಪಡಿಸಿ ಶೇಕಡ ಐದರಷ್ಟು ವಿಕೃತಕಾಮಿಗಳು ಇದ್ದಾರೆ. ಇವರು ಅತ್ಯಂತ ವಿಕೃತ ಮನಸ್ಸಿನವರು. ಕಾನೂನು ಕಟ್ಟಲೆಗಳ ಭಯವಿಲ್ಲದವರು. ಹೆಣ್ಣಿನ ಬಗ್ಗೆ ಯಾವುದೇ ರೀತಿಯ ಸಹಾನುಭೂತಿ ಹೊಂದಿಲ್ಲದವರು. ಕೊಲೆ ಅತ್ಯಾಚಾರವನ್ನು ಆನಂದಿಸುವವರು. ಇವರು ಹುಟ್ಟಾ ಕ್ರಿಮಿನಲ್ ಗಳು.....

ಹೀಗೆ ಈ ಸಮಾಜದಲ್ಲಿ ಸಾಮಾನ್ಯವಾಗಿ ಜನರ ಮನಸ್ಥಿತಿಯನ್ನು, ಹೆಣ್ಣಿನ ವಿಷಯದಲ್ಲಿ ಹೀಗೆ ವಿಂಗಡಿಸಬಹುದು. ಇದು ಖಚಿತ ಅಧ್ಯಯನ ವರದಿಯಲ್ಲ. ಒಂದು ಅನುಭವದ ಅಂದಾಜು ಮಾತ್ರ.....

ಭಾರತದ ಸಾಮಾಜಿಕ ವ್ಯವಸ್ಥೆಯಲ್ಲಿಯೇ ಮತ್ತು ಈ ಸಾಮಾಜಿಕ ರಚನೆಯ ವಿಧಾನದಲ್ಲಿಯೇ ಶೋಷಣೆ ಎಂಬುದು ಅಡಗಿದೆ. ಇದು ಕೇವಲ ಹೆಣ್ಣಿನ ಮೇಲಿನ ದೌರ್ಜನ್ಯಕ್ಕೆ ಮಾತ್ರ ಸೀಮಿತವಾಗಿಲ್ಲ. ಇಲ್ಲಿ ಬಲಾಢ್ಯರು ದುರ್ಬಲರನ್ನು ಶೋಷಿಸಲೆಂದೇ ಈ ಸಾಮಾಜಿಕ ವ್ಯವಸ್ಥೆ ರೂಪಿತವಾಗಿದೆ.....

ಅದು ಆರ್ಥಿಕವಾಗಿಯೇ ಇರಲಿ, ಜಾತಿ ವ್ಯವಸ್ಥೆಯೇ ಇರಲಿ, ಶೈಕ್ಷಣಿಕವಾಗಿಯೇ ಇರಲಿ ಒಟ್ಟಿನಲ್ಲಿ ಬಲಾಢ್ಯರು ದುರ್ಬಲರ ಮೇಲೆ ಸದಾ ಸವಾರಿ ಮಾಡುತ್ತಲೇ ಇರುತ್ತಾರೆ. ಅದಕ್ಕಾಗಿಯೇ ಅದನ್ನು ನಿಯಂತ್ರಿಸಲು ಪ್ರಜಾಪ್ರಭುತ್ವ ವ್ಯವಸ್ಥೆ ಮತ್ತು ಸಂವಿಧಾನ ಜಾರಿಯಾಗಿದೆ. ಆದರೆ ಅಲ್ಲೂ ಸಹ ಬಲಾಢ್ಯರು ಕಾನೂನಾತ್ಮಕವಾಗಿಯೇ ಶೋಷಣೆ ಮಾಡುತ್ತಾರೆ.....

ಅಂದರೆ ಒಟ್ಟಾರೆಯಾಗಿ ಮಾನವೀಯ ಮೌಲ್ಯಗಳು, ಜೀವನ ವಿಧಾನಗಳು, ನಾಗರೀಕ ಮೌಲ್ಯಗಳು ಮನುಷ್ಯನಲ್ಲಿ ಸಹಜವಾಗಿಯೇ ಬೆಳವಣಿಗೆ ಹೊಂದದೆ, ಅಜ್ಞಾನ, ಅಹಂಕಾರ, ದುಷ್ಟತನ ಮನುಷ್ಯನಲ್ಲಿ ಅಡಕವಾಗಿ ತನ್ನ ಸ್ವಾರ್ಥಕ್ಕಾಗಿ ಸ್ಫೋಟಗೊಂಡರೆ ಅದನ್ನು ನಿಯಂತ್ರಿಸುವುದು ತುಂಬಾ ಕಷ್ಟ. ಎಷ್ಟೇ ಕಠಿಣ ಕಾನೂನುಗಳು, ಎಷ್ಟೇ ಅಧ್ಯಯನ ವರದಿಗಳು, ತನಿಖಾ ಆಯೋಗಗಳು ಬಂದರೂ ಅವೆಲ್ಲವೂ ಆ ಕ್ಷಣದ ಪ್ರತಿಕ್ರಿಯೆಗಳು ಮಾತ್ರವೇ. ಅದನ್ನು ಮೀರಿ ದುಷ್ಕೃತ್ಯಗಳು ನಡೆಯುತ್ತಲೇ ಇರುತ್ತದೆ......

ಇಷ್ಟೆಲ್ಲಾ ಆಧುನಿಕತೆ, ತಂತ್ರಜ್ಞಾನ, ಸಮೂಹ ಸಂಪರ್ಕ ಕ್ರಾಂತಿ, ವಿದ್ಯಾಭ್ಯಾಸ ಎಲ್ಲವೂ ಪಡೆದ ನಂತರವೂ ಕೇರಳದಂತ ಬಹುತೇಕ ವಿದ್ಯಾವಂತರಿರುವ ರಾಜ್ಯದಲ್ಲಿಯೇ, ಕರ್ನಾಟಕದಂಥ ಬುದ್ಧಿವಂತರಿರುವ ರಾಜ್ಯದಲ್ಲಿಯೇ, ಅದೂ ಬೆಳಕಿನ ಬಣ್ಣದ ಲೋಕವೆಂಬ ಚಿತ್ರರಂಗದಲ್ಲಿಯೇ ಇಷ್ಟೊಂದು ಲೈಂಗಿಕ ದೌರ್ಜನ್ಯಗಳು ನಡೆಯುತ್ತಿರುವಾಗ ಇದನ್ನು ನಾಗರಿಕ ಸಮಾಜವೆಂದು ಹೇಗೆ ಕರೆಯುವುದು.....

ಯಾರೋ, ಎಲ್ಲೋ ಕೆಲವು ಅಜ್ಞಾನಿಗಳು, ಕ್ರಿಮಿನಲ್ ಗಳು ಈ ರೀತಿಯ ದೌರ್ಜನ್ಯವೆಸಗುತ್ತಿದ್ದರೆ ಅದನ್ನು ನಿಯಂತ್ರಿಸಬಹುದು. ಆದರೆ ಇಷ್ಟು ಮುಂದುವರಿದ ಸಮಾಜದಲ್ಲಿ, ಇಷ್ಟೊಂದು ಬಹಿರಂಗವಾಗಿ ಕಾಸ್ಟ್ ಕೌಚಿಂಗ್ ನಡೆಯುತ್ತಿದೆ ಎಂದರೆ ನಮ್ಮ ಸಮಾಜದ ಮೂಲ ರಚನೆಯನ್ನೇ ಪ್ರಶ್ನಿಸಬೇಕಾಗುತ್ತದೆ. ಆದ್ದರಿಂದ ಇದು ಶೋಷಣೆಯ ಒಂದು ವಿಧಾನ ಮಾತ್ರ. ಚಿತ್ರರಂಗ ಕೇವಲ ತನ್ನ ಶೋಷಣೆಗೆ ಮಾತ್ರ ಧ್ವನಿಯೆತ್ತಿದರೆ ಸಾಲದು. ಚಿತ್ರರಂಗ ತನ್ನ ಚಿತ್ರ ಕಥೆಗಳಲ್ಲಿಯೇ ಮಾನವಿಯ ಮೌಲ್ಯಗಳನ್ನು ಮೊದಲು ತುಂಬಬೇಕು. ಇಡೀ ಸಮಾಜ ಮಾನವೀಯ ಮೌಲ್ಯಗಳ ಬಗ್ಗೆ ಮಾತನಾಡಬೇಕು, ಅನುಸರಿಸಬೇಕು.....

ಅದನ್ನು ಹೊರತುಪಡಿಸಿ ಕೇವಲ ಯಾವುದೋ ಕೆಲವು ಘಟನೆಗಳನ್ನು ಮಾತ್ರ ಪ್ರತಿಭಟಿಸಿದರೆ ಅದರಿಂದ ಯಾವುದೇ ಪ್ರಯೋಜನವು ಆಗುವುದಿಲ್ಲ. ಮನುಷ್ಯ ತನಗೆ ಪೆಟ್ಟಾದಾಗ ಪ್ರತಿಕ್ರಿಸುತ್ತಾನೆ ನಿಜ. ಅದು ಸಹಜ. ಆದರೆ ಇತರರ ನೋವಿಗೆ ಸ್ಪಂದಿಸುವ ಗುಣ ಮತ್ತು ತಾನು ಮಾನವಿಯ ಮೌಲ್ಯಗಳ, ನಾಗರಿಕ ಮೌಲ್ಯಗಳ ಪರವಾಗಿ ತನ್ನ ನಡವಳಿಕೆಗಳನ್ನು ರೂಪಿಸಿಕೊಳ್ಳದಿದ್ದರೆ ಇದೆಲ್ಲವೂ ದಿನನಿತ್ಯದ ಚಟುವಟಿಕೆಗಳಾಗಿ, ಇನ್ನು ಎಷ್ಟೇ ವರ್ಷವಾದರೂ ನಿರಂತರವಾಗಿ ನಡೆಯುತ್ತಲೇ ಇರುತ್ತವೆ.....

ಆದ್ದರಿಂದ ದಯವಿಟ್ಟು ಒಳ್ಳೆಯತನವೆಂಬುದು ಆ ಕ್ಷಣದ ಪ್ರತಿಕ್ರಿಯೆಯಲ್ಲ. ಅದು ನಮ್ಮ ತಿಳುವಳಿಕೆ ಮತ್ತು ನಡವಳಿಕೆ ಎಂಬುದನ್ನು ಮಾಧ್ಯಮಗಳು, ರಾಜಕಾರಣಿಗಳು, ಆಡಳಿತಗಾರರು ಸೇರಿದಂತೆ ಎಲ್ಲರೂ ಅರ್ಥ ಮಾಡಿಕೊಂಡಾಗ ಮಾತ್ರ ಈ ಸಮಸ್ಯೆಗೆ ಒಂದು ಪರಿಹಾರ ಸಿಗಬಹುದು. ಇಲ್ಲದಿದ್ದರೆ ಇದು ಮತ್ತೊಂದು ಪ್ರಕರಣವಾಗಿ ದಾಖಲಾಗುತ್ತದೆ ಅಷ್ಟೇ......

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,

ಜನರಜೀವನಮಟ್ಟಸುಧಾರಣೆಯಗುರಿಯೊಂದಿಗೆ, ಮನಗಳಲ್ಲಿ,ಮನೆಗಳಲ್ಲಿ,ಮತಗಳಲ್ಲಿ,ಪರಿವರ್ತನೆಗಾಗಿ, ಮನಸ್ಸುಗಳ ಅಂತರಂಗದ ಚಳವಳಿ,



» ಲೇಖನ
ವಿವೇಕಾನಂದ. ಹೆಚ್.ಕೆ.
9844013068



ಚಲನಚಿತ್ರ ನಾಯಕ ನಟ ಡಾಲಿ ಧನಂಜಯ ಇಂದು ಚಿತ್ರದುರ್ಗ ಶ್ರೀ ಜಗದ್ಗುರು ಸಿದ್ಧರಾಮೇಶ್ವರ ಮಹಾಸಂಸ್ಥಾನದ ಭೋವಿ ಗುರುಪೀಠಕ್ಕೆ ಆಗಮಿಸಿ ಜಗದ್ಗುರು ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿ ರವರ ದರ್ಶನಾಶೀರ್ವಾದ ಪಡೆದು, ತಮ್ಮ ವಿವಾಹ ಮಹೋತ್ಸವಕ್ಕೆ ಆಮಂತ್ರಣಗೈದರು.

## ಚಿತ್ರದುರ್ಗ: 23ರಂದು ತರಬೇತಿ ಕಾರ್ಯಕ್ರಮ

**ಚಿತ್ರದುರ್ಗ:** ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಕಾರ್ಮಿಕ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪೊಲೀಸ್ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ವತಿಯಿಂದ ಇದೇ ಡಿ.23ರಂದು ಬೆಳಿಗ್ಗೆ 10.30ಕ್ಕೆ ನಗರದ ಜಿಲ್ಲಾ ಕ್ರೀಡಾಂಗಣ ಸಭಾಂಗಣದಲ್ಲಿ ಶಾಲೆಯಲ್ಲಿದೆ ಶಿಕ್ಷಣ ಜೊತೆಗೆ ರಕ್ಷಣೆ ಉಚಿತ ಮತ್ತು ಕಡ್ಡಾಯ ಶಿಕ್ಷಣ ಕಾಯ್ದೆ-2009ರ ಅನ್ವಯ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಮರಳಿ ಶಾಲೆಗೆ ಸೇರಿಸುವ ಅಂದೋಲನಾ ಕುರಿತು ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಡಾ.ಕೆ.ಟಿ.ತಿಪ್ಪೇಸ್ವಾಮಿ ಉದ್ಘಾಟಿಸುವರು. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಉಪನಿರ್ದೇಶಕ ಆರ್.ಮಂಜುನಾಥ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಚಿತ್ರದುರ್ಗ ಪೊಲೀಸ್ ಉಪಾಧೀಕ್ಷಕ ಪಿ.ಕೆ.ದಿನಕರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್ ಭಾಗವಹಿಸುವರು.

## ಇಂದು ಕಾರ್ತಿಕೋತ್ಸವ

» **ದಾವಣಗೆರೆ**

ನಗರದ ಕಾಯಿಪೇಟೆಯ ಶ್ರೀ ಬಸವೇಶ್ವರ ದೇವಸ್ಥಾನ ಸೇವಾ ಸಂಘದ ವತಿಯಿಂದ ಸೋಮವಾರ 9 ಗಂಟೆಗೆ ಕಡೆ ಕಾರ್ತಿಕೋತ್ಸವ ನಡೆಯಲಿದೆ. ಮಂಗಳವಾರ ಮತ್ತು ಬುಧವಾರ ನಗರದ ಪಿ.ಬಿ. ರಸ್ತೆಯ ಪೂಜಾ ಇಂಟರ್‌ನ್ಯಾಷನಲ್ ಪಕ್ಕದಲ್ಲಿರುವ ಶ್ರೀ ಮಹೇಶ್ವರ ಸ್ವಾಮಿಯ ನಿವೇಶನದಲ್ಲಿ ಶ್ರೀ ಮಹೇಶ್ವರ ಸ್ವಾಮಿಯ ಜಾತ್ರೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಶ್ರೀ ಬಸವೇಶ್ವರ ದೇವಸ್ಥಾನ ಸೇವಾ ಸಮಿತಿ ತಿಳಿಸಿದೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T